

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 07 Issue : 254 Friday 20-06-2025 E-mail : maruti.b.hosamani76@gmail.com Page: 4 Price : Rs. 1/-


## ರಾಯಚೂರು ನಗರದ ಕೃಷಿ ವಿಶ್ವವಿದ್ಯಾಲಯ ಆವರಣದಲ್ಲಿ ಸಚಿವ ಎನ್.ಎಸ್ ಹುಟ್ಟು ಹಬ್ಬದ ಕಾರ್ಯಕ್ರಮ ಆಯೋಜನೆ

**ಸಿಹಿ ಕಹಿ ಸುದ್ದಿ,**
**ಮಾನ್ವಿ :** ರಾಜ್ಯದ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಇಲಾಖೆ ಸಚಿವ ಎನ್.ಎಸ್ ಬೋಸರಾಜು ಅವರ 79 ನೇ. ಹುಟ್ಟು ಹಬ್ಬದ ನಿಮಿತ್ಯ ರಾಯಚೂರು ನಗರದ ಕೃಷಿ ವಿಶ್ವವಿದ್ಯಾಲಯ ಆವರಣದಲ್ಲಿ ಜೂನ್ 21 ರಂದು ಬೆಳಿಗ್ಗೆ 10.30 ಕ್ಕೆ ಅಭಿನಂದನೆ ಹಾಗೂ ಚೈತನ್ಯ ಸಾಗರ ಗ್ರಂಥ ಲೋಕಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು. ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮಾನ್ವಿಯ ಕಾಂಗ್ರೆಸ್ ಮುಖಂಡ ರಹೆಮತ್ ಅಲಿ ಕರೆ ನೀಡಿದರು.



ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿ, ಸಚಿವ ಎನ್.ಎಸ್ ಬೋಸರಾಜು ಅವರು ರಾಯಚೂರು ಜಿಲ್ಲೆಯಲ್ಲಿ ಕಳೆದ 50 ವರ್ಷದಿಂದ ರಾಜಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ್ದಾರೆ. ರಾಯಚೂರು ಜಿಲ್ಲೆಯಲ್ಲಿಯೇ ಸೌಹಾರ್ದತೆ ಯುತವಾಗಿ ರಾಜಕೀಯ ವ್ಯಕ್ತಿ, ಹೀಗಾಗಿ ಲಕ್ಷಾಂತರ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಮುಖಂಡರು ಭಾಗವಹಿಸಲಿದ್ದಾರೆ ಎಂದರು.

ಸಚಿವ ಎನ್.ಎಸ್ ಬೋಸರಾಜು ಅವರ ಕಾರ್ಯಕ್ರಮಕ್ಕೆ ತೆಲಂಗಾಣ ಉಪ ಮುಖ್ಯಮಂತ್ರಿ ಮಲ್ಲುಭಟ್ಟಿ ವಿಕ್ರಾಮರ್ಕ್ ಸೇರಿದಂತೆ ರಾಜ್ಯದ ಸ್ಪೀಕರ್ ಯು.ಟಿ ಖಾದರ್, ಗೃಹ ಮಂತ್ರಿ ಜಿ.ಪರಮೇಶ್ವರ ಹಾಗೂ ಇನ್ನಿತರ ಸಚಿವರು ಶಾಸಕರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

## ವಿಶ್ವ ಅಪ್ಪಂದಿರ ದಿನ ಅಪ್ಪ ಬದುಕು ರೂಪಿಸುವ ಶಿಲ್ಪಿ – ಅಶೋಕ ಬಿರಾದಾರ



**ಸಿಹಿ ಕಹಿ ಸುದ್ದಿ,**
**ವಿಜಯಪುರ:** ಅಪ್ಪ ಅಂದರೆ ಕೇವಲ ಜೀವ ಕೊಟ್ಟವನಲ್ಲ. ಬದುಕು ರೂಪಿಸುತ್ತಾ, ಧೈರ್ಯವಾಗಿ ಎಲ್ಲಾರು ಎದುರು ನಿಲ್ಲಲು ದಾರಿ ತೋರಿದ ಶಿಲ್ಪಿಯಾಗಿದ್ದಾನೆ ಎಂದು ವಿಜಯಪುರದ ಆರ್ಯಭಟ ಕರಿಯರ್ ಅಕಾಡೆಮಿ ಅಧ್ಯಕ್ಷ ಅಶೋಕ ಬಿರಾದಾರ ಹೇಳಿದರು.

ಗುರುವಾರ ದಂದು ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ವಿಶ್ವ ಅಪ್ಪಂದಿರ ದಿನದ ನಿಮಿತ್ತ ಹಮ್ಮಿಕೊಂಡ 'ಅಪ್ಪ–ಬದುಕಿಗೆ ಬೆಳಕು' ಚಿಂತನಾ ಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪುರಾಣ ಕಾಲದಿಂದಲೂ ತಂದೆ ಮಕ್ಕಳ ಸಂಬಂಧ ಶ್ರೇಷ್ಠ ಎನಿಸಿ ಕೊಂಡಿದೆ. ತನ್ನ ನೋವ ನುಂಗಿ ಮಕ್ಕಳಿಗೆ ಪ್ರೀತಿ ಧಾರೆ ಎರೆಯುವ ತಂದೆಗೆ ಮಕ್ಕಳ ಭವಿಷ್ಯವೇ ಮುಖ್ಯ ಎಂದು ಹೇಳಿದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಅಪ್ಪ ಅಂದರೆ ಆಸರೆ, ತ್ಯಾಗ, ಗಾಂಭೀರ್ಯ, ಪ್ರೀತಿ. ಅಪ್ಪ ದೇವರು ಕೊಟ್ಟ ವರ. ತಂದೆ ಜೊತೆಗಿದ್ದರೆ ಸಾಕು ಪ್ರಪಂಚದಲ್ಲಿ ಏನು ಬೇಕಾದರೂ ಸಾಧಿಸುತ್ತೇನೆ ಎಂಬ ವಿಶ್ವಾಸ ಸದಾ ಇರುತ್ತದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಸುರೇಶಗೌಡ ಬಿರಾದಾರ ಮಾತನಾಡಿ, ಅಪ್ಪ ಅನ್ನೋ ಪದಕ್ಕೆ ಸಾವಿರ ಆನೆಗಳ ಬಲ. ದರ್ಪ, ಕೋಪ, ಶಿಸ್ತು, ಅನುಮಾನ ಇವುಗಳ ಸಮ್ಮಿಲನವೇ ಅಪ್ಪ. ಆತ ಸರ್ವಾಧಿಕಾರಿಯಲ್ಲಾ. ಬದಲಿಗೆ ಸರಿ ತಪ್ಪುಗಳನ್ನು ತಿದ್ದುವ ಮಾರ್ಗದರ್ಶಕ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಅಧ್ಯಕ್ಷತೆ ವಹಿಸಿದ್ದರು. ಪಾಲಕ ಪ್ರತಿನಿಧಿ ಅಶೋಕ ಗಾಣಿಗೇರ ಮಾತನಾಡಿದರು. ಭೀರಪ್ಪ ಪೂಜಾರಿ, ಕಾರ್ಯದರ್ಶಿ ಸುನಂದಾ ಹುಣಶ್ಯಾಳ ಹಾಗೂ ಶಿಕ್ಷಕರಾದ ರಾಘು ಮೊಗಳ, ಸಚೀನ ಅವಟಿ, ನವೀನ ಬಂಡೆನ್ನವರ, ಜಯಶ್ರೀ ಬಂಗಾರಿ, ಲಕ್ಷ್ಮೀ ಮಸೂತಿ,ರೇಣುಕಾ ಭಜಂತ್ರಿ, ಶ್ರುತಿ ಪೂಜಾರಿ, ಸಿದ್ದು ರತ್ನಾಕರ, ರಾಜಶೇಖರ ಶಿರಶ್ಯಾಡ, ಅಲ್ಲಾಭಕ್ಷ ಇನಾಮದಾರ ಸೇರಿದಂತೆ ನೂರಾರು ಪಾಲಕರು ಮತ್ತು ಮಕ್ಕಳು ಭಾಗವಹಿಸಿದ್ದರು.

## "ನೀ ಸಿಗುವ ಮೊದಲು" – ಪೋಸ್ಟರ್ ಬಿಡುಗಡೆ



**ಸಿಹಿ ಕಹಿ ಸುದ್ದಿ,**
**ಬೆಂಗಳೂರು :** ಶ್ರೀ ವೀರಭದ್ರೇಶ್ವರ ಸಿನಿ ಕ್ರಿಯೇಷನ್ ಅವರ ಮನು ಸಹಕಾರದ "ನೀ ಸಿಗುವ ಮೊದಲು" ಎಂಬ ಸ್ಟೋರಿ ಕಂಟೆ–ಂಟ್ ಆಲ್ಬಮ್ ಸಾಂಗ್ ಹಾಗೂ ಹೊಸ ಚಲನ ಚಿತ್ರದ ಪೋಸ್ಟರನ್ನು ಚಲನ ಚಿತ್ರ ನಟ ಆ?ಯಕ್ಷನ್ಪ್ರಿನ್ಸ್ ಧ್ರುವ ಸರ್ಜಾ ಬಿಡುಗಡೆ ಮಾಡಿದರು.

ಪೋಸ್ಟರ ಬಿಡುಗಡೆ ನಂತರ ಧ್ರುವ ಸರ್ಜಾ ಯುವ ಕಲಾವಿದರಿಗೆ, ತಂಡ–ಕ್ಕೆ ಶುಭ ಕೋರಿದರು. ಹಿರಿಯ ಪ್ರಬುದ್ಧ ಕಲಾವಿದರಾದ ಧ್ರುವ ಸರ್ಜಾ ಅವರು ಪೋಸ್ಟರ್ ಬಿಡುಗಡೆ ಮಾಡಿ ಪ್ರೋತ್ಸಾಹಿಸಿ ಶುಭ ಹಾರೈಸಿದ್ದಾರೆ. ಅದು ನಮ್ಮ ಭಾಗ್ಯ. ನಿಜಕ್ಕೂ ತಂಡಕ್ಕೆ ಖುಷಿಯಾಗಿದೆ. ಮಡಿಕೇರಿ ಆನೆ ದುಬಾರಿ ಸಕಲೇಶಪುರ ಮತ್ತು ಬೆಂಗಳೂರು ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದ್ದು, ಕಲಾವಿದರಾದ ಮೋಹನ್.ಬಿ ಮತ್ತು ಅಶ್ವಿನಿ ಶೆಟ್ಟಿ ಮನೋಜ್ಞವಾಗಿ ನಟಿಸಿದ್ದಾರೆ. ಸದ್ಯ ಆಲ್ಬಂ ಸಾಂಗ್ ಮಾತ್ರ ಬಿಡುಗಡೆ ಮಾಡುತ್ತಿದ್ದು ಇದೇ ಹೆಸರಿನಲ್ಲಿ ಚಲನ ಚಿತ್ರ ನಿರ್ಮಾಣ ತಯ್ಯಾರಿ ನಡೆಸಿದ್ದೇವೆ. ಶೀಘ್ರದಲ್ಲೇ ಚಿತ್ರೀಕರಣ ಕೂಡ ಆರಂಭಿಸುತ್ತೇವೆ ಎಂದು ನಿರ್ದೇಶಕ ರಘು ತಿಳಿಸಿದರು.

ಚಿತ್ರಕಥೆ,ನಿರ್ದೇಶನ ರಘು ಅ ರೂಗಿ, ಸಂಭಾಷಣೆ, ಸಹ ನಿರ್ದೇಶನ ರಮೇಶ್ ಜಿ.ಆರ್, ಕಥೆ, ಸಾಹಿತ್ಯ, ಸಂಗೀತ, ವಿಶಾಲ್ ಆಲಾಪ್, ಹಿನ್ನೆಲೆ ಸಂಗೀತ ಎ.ಟಿ ರವೀಶ್,ಸಂಕಲನ,ಛಾಯಾಗ್ರಹಣ ಪ್ರೀತಮ್ ಪೂಜಾರಿ, ಗಾಯಕರು ವಿಶಾಕ್ ನಾಗಲಾಪುರ, ಕೀರ್ತನ ಚಂದ್ರು, ಮ್ಯೂಜಿಷಿಯನ್ ಅಭಿನವ್ ಅಯ್ಯಂಗಾರ್, ಸೌಂಡ್ ಇಂಜಿನಿಯರ್ ವಿಜಯ್ ಅರುಣ್, ರಘು ರೂಗಿ, ಪ್ರೋಗ್ರಾಮ್, ತೇಜಸ್ ಮತ್ತು ಆಕಾಶ್, ಮಾಸ್ಟರಿಂಗ್ ಮಿಕ್ಸಿಂಗ್ ಸುರಾಜ್ ಎಸ್ ವಾಸುದೇವ್, ಸಹಾಯ ಭಗವತಿ ಕಾಟೇಜ್ (ಮಡಿಕೇರಿ), ಮೋದಿ ತಳವಾರ. ಪ್ರೊಡಕ್ಷನ್ ಮ್ಯಾನೇಜರ್ ರಾಹುಲ್ ಎನ್. ಎಚ್ ಮಾಧ್ಯಮ ಸಂಪರ್ಕ ಡಾ, ಪ್ರಭು ಗಂಜಿಹಾಳ. ಡಾ, ವೀರೇಶ್ ಹಂಡಿಗಿ, ನಿರ್ಮಾಪಕರು ವಾಣಿ ಕಾಂತರಾಜ್ (ಬೇಲೂರು) ಆಗಿದ್ದಾರೆ,

**– ಡಾ, ಪ್ರಭು ಗಂಜಿಹಾಳ**
**ಮೊ:–9448775346**

## ಕ್ಷೇತ್ರದ ಅಭಿವೃದ್ಧಿಯಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿಗಳ ಸಹಕಾರ ಮುಖ್ಯ: ಸಿದ್ದು ಸವದಿ

**ರಬಕವಿ ಬನಹಟ್ಟಿ :** ಸರ್ಕಾರದಿಂದ ಮಂಜೂರಿ ತಂದಿದ್ದರೂ ಕೂಡ ಕೆಲವು ಕೆಲಸಗಳು ನಡೆದಿರುವುದಿಲ್ಲ. ಕೆಲವು ಕಾರ್ಯಗಳು ಅರ್ಧಕ್ಕೆ ನಿಂತಿ–ರುತ್ತವೆ. ಅವರು ಅವುಗಳನ್ನು ಮುಕ್ತಾಯ ಗೊಳಿಸಿರುವುದಿಲ್ಲ. ಕೆಲವು ಕಾಮಗಾರಿಗಳಲ್ಲಿ ತಕರಾರುಗಳು ಇರುತ್ತವೆ. ಅವೆಲ್ಲವುಗಳನ್ನು ಪರಿಶೀಲನೆ ಮಾಡಿ ಮುಂದಿನ ಕ್ರಮ ತೆಗೆದುಕೊಳ್ಳುವುದರ ಕು–ರಿತು ಪ್ರಗತಿ ಪರಿಶೀಲನಾ ಸಭೆಯನ್ನು ಕರೆಯಲಾಗಿದೆ. ಕ್ಷೇತ್ರದ ಅಭಿವೃದ್ಧಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳ ಸಹಕಾರ ಮುಖ್ಯವಾಗಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.



ಅವರು ಶುಕ್ರವಾರ ಇಲ್ಲಿನ ನಗರಸಭೆಯ ಸಭಾ ಭವನದಲ್ಲಿ ನಡೆದ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ಲ್ ೂ ೀ ಕ್ ೂ ೀ ಪ್ ಂ ು್ ೂ ೀ ಗಿ ಇಲಾಖೆಯಲ್ಲಿಯ ಹಲವಾರು ಕಾಮಗಾರಿಗಳು ನಾಲ್ಕೈದು ವರ್ಷಗಳಿಂದ ನಡೆದಿಲ್ಲ. ಅಂಥವರ ಕುರಿತು ಸಚಿವರ ಗಮನಕ್ಕೆ ತರುತ್ತೇನೆ. ಅಂಥವ–ರಿಗೆ ನೋಟೀಸು ನೀಡುವಂತೆ ಅಧಿಕಾರಿಗಳಿಗೆ ಶಾಸಕ ಸವದಿ ತಿಳಿಸಿದರು.

ಜಮಖಂಡಿ ತಾಲ್ಲೂಕು ವೈದ್ಯಾಧಿಕಾರಿ ಜಿ. ಎಚ್. ಗಲಗಲಿ ಮಾತನಾಡಿ, ರಬಕವಿ ಬನಹಟ್ಟಿ ತಾಲ್ಲೂಕು ಆಸ್ಪತ್ರೆಗೆ ಮದನಮಟ್ಟಿ ಗ್ರಾಮದ ಬಳಿ 9 ಎಕರೆ 4 ಗುಂಟೆ ಸ್ಥಳ ಮಂಜೂರಾಗಿದೆ. ಆದಷ್ಟು ಬೇಗನೆ ಈ ಕಾರ್ಯ ನಡೆಯಲಿದೆ. ಅದೇ ರೀತಿಯಾಗಿ ತೇರದಾಳದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವೆಂದು ಮೇಲ್ದರ್ಜೆಗೆ ಹೆಚ್ಚಿಸುವಲ್ಲಿ ಪರವಾನಗಿ ದೊರೆತಿದೆ.

ಪಶು ಆಸ್ಪತ್ರೆಯ ಡಾ. ಬಸವರಾಜ ಗೌಡರ ಮಾತನಾಡಿ, ಕ್ಷೇತ್ರದಲ್ಲಿ ಇದುವರೆಗೆ 69,155 ಜಾನುವಾರುಗಳಿಗೆ ಕಾಲುಬಾಯಿ ಲಸಿಕೆ ನೀಡಲಾಗಿದೆ ಮತ್ತು 27,431 ಜಾನುವಾರುಗಳಿಗೆ ಚರ್ಮಗಂಟು ರೋಗಕ್ಕೆ ಲಸಿಕೆ ನೀಡಲಾಗಿದೆ. ರಬಕವಿ ಬನಹಟ್ಟಿಯಲ್ಲಿ 17 ಹುದ್ದೆಗಳು ಮತ್ತು ತೇರದಾಳದಲ್ಲಿ 6 ಹುದ್ದೆಗಳು ಖಾಲಿ ಇವೆ ಎಂದರು. ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸುವಂತೆ ಕ್ರಮ ತೆಗೆದುಕೊಳ್ಳುವಂತೆ ಶಾಸಕ ಸಿದ್ದು ಸವದಿ ಕ್ಷೇತ್ರ ಶಿಕ್ಷಣಾಧಿಕಾ–ರಿಗಳಿಗೆ ತಿಳಿಸಿದರು.

ಈಗಾಗಲೇ ಪುಸ್ತಕ ವಿತರಣೆ ಕಾರ್ಯ ಕೊನೆಯ ಹಂತಕ್ಕೆ ತಲುಪಿದೆ.

ತಾಲ್ಲೂಕಿನಲ್ಲಿ ಸಮವಸ್ತ್ರ ವಿತರಣೆಯನ್ನು ಸೋಮವಾರದಿಂದ ಆರಂಭಿಸಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಬಸನ್ನವರ ತಿಳಿಸಿದರು.

ತಾಲೂಕಿನಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೀಡಲಾಗಿದೆ.

ಶೂ ಮತ್ತು ಸಾಕ್ಸ್‌ಗಳನ್ನು ಖರೀದಿ ಮಾಡುವಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಶಿಕ್ಷಕರು ಮಕ್ಕಳ ಮುಂದೆ ಯಾವುದೇ ರಾಜಕೀಯ ಮಾಡಬಾರದು. ಶಿಕ್ಷಣ ಕ್ಷೇತ್ರದಲ್ಲಿ ಯಾವುದೇ ರಾಜಕಾರಣ ಇರಬಾರದು ಎಂದು ಶಾಸಕ ಸವದಿ ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ, ತೇರದಾಳ ತಹಶೀಲ್ದಾರ್ ವಿಜಯಕುಮಾರ ಕಡಕೋಳ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಸಿದ್ದಪ್ಪ ಪಟ್ಟಿಹಾಳ, ಭಾಸ್ಕರ ಬಡಿಗೇರ ಸೇರಿದಂತೆ ಇನ್ನೂ ಅನೇಕರು ಹಾಜರಿದ್ದರು.

## ನೀಟ್ ಕೌನ್ಸಿಲಿಂಗ್ – ಪೂರ್ವ ತಯಾರಿ

**ಸಿಹಿ ಕಹಿ ಸುದ್ದಿ,**
**ಗದಗ :** ವಿದ್ಯಾಪೋಷಕ ಸಂಸ್ಥೆ ಧಾರವಾಡ ವತಿಯಿಂದ 2025–26 ನೇ. ಶೈಕ್ಷಣಿಕ ಸಾಲಿನಲ್ಲಿ ವೈದ್ಯಕೀಯ ವಿಭಾಗಕ್ಕೆ ಪ್ರವೇಶ ಪಡೆಯುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತ ನೀಟ್ ಕೌನ್ಸಿಲಿಂಗ್ ಪೂರ್ವ ತಯಾರಿ ಬಗ್ಗೆ ಇದೆ ಜೂ. 26 ರಂದು, ಮಧ್ಯಾಹ್ನ 12.00 ಗಂಟೆಗೆ ಆನ್ಲೈನ್ ಮೂಲಕ ಕಾರ್ಯಾಗಾರವನ್ನು ಆಯೋಜಿಸಿದೆ.

ಈ ಕಾರ್ಯಾಗಾರಕ್ಕೆ ಡಾ, ವರುಣ್ ಶೆಟ್ಟಿ, Dept.of Pedodontic, BDS, MDS, ಎಸ್.ಡಿ.ಎಮ್ ಡೆಂಟಲ್ ಕಾಲೇಜ್ ಧಾರವಾಡ ಇವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಈ ವಿಷಯಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ. ಎಂ.ಬಿ.ಬಿ.ಎಸ್, ಬಿ.ಡಿ.ಎಸ್, ಬಿ.ಎ.ಎಂ.ಎಸ್, ಬಿ.ಎಚ್.ಎಂ.ಎಸ್, ಯುನಾನಿ ಮೆಡಿಸನ್ಸ್, ವೆಟರನರಿ ಸೈನ್ಸ್ ಮುಂತಾದ ಕೋರ್ಸುಗಳ ಬಗ್ಗೆ ಮಾಹಿತಿ. ರ್ಯಾಂಕಿಂಗ್ ಮತ್ತು ಕಟ್ ಆಫ್ % , ಸೀಟ್ ಆಯ್ಕೆ ಪ್ರಕ್ರಿಯೆ ಕುರಿತು ಮಾಹಿತಿ ನೀಡಲಿದ್ದಾರೆ. ಈ ಕಾರ್ಯಾಗಾರದಲ್ಲಿ ತಮ್ಮ ಭಾಗವಹಿಸುವಿಕೆಯನ್ನು ವಿದ್ಯಾರ್ಥಿ/ವಿದ್ಯಾರ್ಥಿನಿಯರು ದಿ :24–06–2025 ರ ಒಳಗಾಗಿ ದೂರವಾಣಿ 0836–2747357 ಮೂಲಕ ಅಥವಾ ಮೊ (ರತ್ನಾ ಹಿಪ್ಪರಗಿ) 9980125686/8861201828ಗೆ ವಾಟ್ಸಪ್ ಮೂಲಕ ತಮ್ಮ ಹೆಸರನ್ನು ನೋಂದಾಯಿಸಬೇಕು. ನಿಗದಿತ ಸಮಯಕ್ಕಿಂತ ಹತ್ತು ನಿಮಿಷ ಮುಂಚಿತವಾಗಿ ಈ ಕೆಳಗಿನ ಲಿಂಕ್ನಲ್ಲಿ ಪ್ರವೇಶ ಆಗಬೇಕು.

https://us06web.zoom.us/j/83537478081?pwd=WjdwOThTQmVkSIZtNmkvS1hka2g4dz09, Meeting ID 83537478081, Pass code: 123456. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ವಿದ್ಯಾರ್ಥಿಗಳು ಡಾ.ಸಂಗಮೇಶ ಸಜ್ಜನರ.–ಮೊ: 994555084 , ಡಾ.ಪ್ರಭು ಗಂಜಿಹಾಳ–ಮೊ: 9448775346 ಇವರನ್ನು ಸಂಪರ್ಕಿಸಬಹುದು.

*****

**ಡಾ. ಪ್ರಭು ಗಂಜಿಹಾಳ**
**ಮೊ : 9448775346**

# ಗಮನ ಸೆಳೆದ ಸಂಗ್ರಾಮ ಕಲ್ಲು ಎತ್ತುವ ಸ್ಪರ್ಧೆ

**ಮಹಾಲಿಂಗಪುರ :** ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಕಾರ ಹುಣ್ಣಿಮೆ ಕ–ರಿಯ ದಿನ ಸಂಗ್ರಾಮ ಕಲ್ಲು ಎತ್ತುವ ಸ್ಪರ್ಧೆ ಮಹಾಲಿಂಗೇಶ್ವರ ಗುಡಿ ಹತ್ತಿರ ಜರುಗಿತು.

ಪದ್ಧತಿಯಂತೆ ಗರಡಿ ಮನೆಯಲ್ಲಿನ ಸಂಗ್ರಾಮ ಕಲ್ಲು ಮತ್ತು ಗುಂಡ ಕಲ್ಲುಗಳನ್ನು ಇಟ್ಟು ಪೂಜಿಸಲಾಗಿತ್ತು. ಸಂಗ್ರಾಮ ಕಲ್ಲುಗಳನ್ನು ಎತ್ತಲು ಕೇವಲ ಇಬ್ಬರು ಯುವಕರು ಹರಸಾಹಸ ಪಡುತ್ತಿದ್ದರು.

ನೂರಾರು ಯುವಕರು ನೋಡಲು ನೂಕು ನುಗ್ಗಲು ಮಾಡಿದ್ದರು. ಅಲ್ಲಿ ನೆರೆದಿದ್ದ ಜನರು ಶಿಳ್ಳೆ, ಚಪ್ಪಾಳೆ ತಟ್ಟಿ ಕಲ್ಲು ಎತ್ತುವ ಯುವಕರನ್ನು ಹುರಿದುಂಬಿಸುತ್ತಿದ್ದರು. ನೋಡಲು ನಿಂತ ಯುವಕರ ನಿಯಂತ್ರಣಕ್ಕಾಗಿ ಪೊಲೀಸರು ಸೂಕ್ತ ಬಂದೋಬಸ್ತ ಮಾಡಿದ್ದರು.

ವ್ಯಾಯಾಮ ಶಾಲೆಯಲ್ಲಿ ಗುರುಗಳು ಕಲಿಸಿದಂತೆ ಸ್ಪರ್ಧಾಳುಗಳು ಕಲ್ಲು ಎತ್ತುತ್ತಿದ್ದರು. ಗ್ರಾಮೀಣ ಭಾಗದಲ್ಲಿ ಜಾತ್ರೆ ಉತ್ಸವಗಳಲ್ಲಿ ನಡೆಯುವ ಈ ಸ್ಪರ್ಧೆಯು ವರ್ಷದಿಂದ ವರ್ಷಕ್ಕೆ ತನ್ನ ಮಹತ್ವ ಕಳೆದುಕೊಳ್ಳುತ್ತಿದೆ. ಇಂತಹ ಸ್ಪರ್ಧೆಯಲ್ಲಿ ಮೊದಲು ಹತ್ತಾರು ಯುವಕರು ಭಾಗವಹಿಸುತ್ತಿದ್ದರು.





ಇಂದು ಕೇವಲ ಇಬ್ಬರು ಮಾತ್ರ ಭಾಗವಹಿಸಿದ್ದು ಇದಕ್ಕೆ ಸಾಕ್ಷಿಯಾಗಿತ್ತು. ಕಲ್ಲು ಎತ್ತುವುದು ಕೇವಲ ಶಕ್ತಿಯ ಪ್ರದರ್ಶನವಲ್ಲ. ಶಕ್ತಿಯ ಜೊತೆಗೆ ಯುಕ್ತಿ, ಸಂಯಮ ಅಗತ್ಯ. ಇಂತಹ ಸಾಹಸ ಕ್ರೀಡೆಗಳಿಂದ ಯುವಕರ ಆರೋಗ್ಯ ಗಟ್ಟಿಯಾಗಿ, ಸದೃಢ ಮೈಕಟ್ಟನ್ನು ಪಡೆಯಬಹುದು ಎಂಬುದು ಭಾಗವಹಿಸಿದ ಸ್ಪರ್ಧಾಳುಗಳ ಅಭಿಪ್ರಾಯವಾಗಿತ್ತು.

ಹಿರಿಯರಾದ ಶಿವಲಿಂಗಯ್ಯಾ ಈರಯ್ಯ ಮಠಪತಿ ಅವರ ಮಾರ್ಗದರ್ಶನದಲ್ಲಿ ನಡೆದ ಕಲ್ಲು ಎತ್ತುವ ಸ್ಪರ್ಧೆಯಲ್ಲಿ ಪಟ್ಟಣದ ಪ್ರಮೋದ ಮಹಾಲಿಂಗಯ್ಯಾ ಮಠಪತಿ (78 ಕೆಜಿ) ಪ್ರಥ–ಮ, ಸಂಭ್ರಮ ಚನ್ನಪ್ಪ ಹೂಗಾರ ದ್ವಿತೀಯ ( 55 ಕೆಜಿ) ಸ್ಥಾನ ಪಡೆದರು.

ಪುರಸಭೆ ಅಧ್ಯಕ್ಷ ಯಲ್ಲನಗೌಡ ಪಾಟೀಲ, ನಿಂಗಪ್ಪ ಬಾಳಿಕಾಯಿ, ವಿಜುಗೌಡ ಪಾಟೀಲ, ಕೃಷ್ಣಗೌಡ ಪಾಟೀಲ, ಈಶ್ವರ ಮಠದ, ಶ್ರೀಶೈಲ ಮಠದ, ಶಿವಾನಂದ ಮೇಟಿ ಸೇರಿದಂತೆ ಇನ್ನೂ ಹಲವರು ಪಾಲ್ಗೊಂಡಿದ್ದರು.

### ಮರೆಯಾಗುತ್ತಿರುವ ಗ್ರಾಮೀಣ ಕ್ರೀಡೆಗಳು

ಹಿಂದಿನ ಕಾಲದಲ್ಲಿ ಗ್ರಾಮೀಣ ಭಾಗದ ಪ್ರತಿಯೊಂದು ಜಾತ್ರೆ, ಉತ್ಸವಗಳಲ್ಲಿ ಯುವಕರು ಸಂಗ್ರಾಮ ಕಲ್ಲು ಮತ್ತು ಗುಂಡಕಲ್ಲು ಎತ್ತುವ ಸಾಹಸ ಕ್ರೀಡೆಗಳಲ್ಲಿ ಭಾಗವಹಿಸಲು ವರ್ಷವಿಡೀ ಗರಡಿ ಮನೆಯಲ್ಲಿ ತರಬೇತಿ ಪಡೆಯುತ್ತಿದ್ದರು. ಇಂದಿನ ಯುವ ಜನತೆ ಗರಡಿ ಮನೆಯನ್ನು ಮರೆತು, ಚಿಕ್ಕ ವಯಸ್ಸಿನಲ್ಲಿಯೇ ಹಲವು ಚಟಗಳಿಗೆ ದಾಸರಾಗುತ್ತಿದ್ದಾರೆ. ಜೊತೆಗೆ ಇಂದಿನ ಆಹಾರದಲ್ಲಿ ಪೌಷ್ಟಿಕ ಆಹಾರ ಇಲ್ಲವಾದ್ದರಿಂದ ಕ್ರಮೇಣ ಗ್ರಾಮೀಣ ಭಾಗದ ಸಾಹಸ ಕ್ರೀಡೆಗಳು ಕಣ್ಮರೆಯಾಗುತ್ತಿರುವದು ವಿಷಾದನೀಯ. ಯುವಕರು ಇಂತಹ ಸಾಹಸ ಕ್ರೀಡೆಗಳತ್ತ ಗಮನಹರಿಸಲು ಪ್ರಯತ್ನಿಸಬೇಕಾಗಿದೆ.

**। ಶಿವಲಿಂಗಯ್ಯಾ ಈರಯ್ಯಾ ಮಠಪತಿ.**
**ಸಾಹಸ ಕ್ರೀಡೆಗಳ ಮಾರ್ಗದರ್ಶಕರು.**

## ಜಿ.ಪಂ ಸಿಇಓ ಅನಿರೀಕ್ಷಿತ ಭೇಟಿ। ವಿವಿಧ ಕಾಮಗಾರಿ ಪರಿಶೀಲನೆ

# ಶಾಲೆ, ಅಂಗನವಾಡಿಗಳಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿ





**ಬಾಗಲಕೋಟ :** ಜಿಲ್ಲೆಯ ಬಾದಾಮಿ ಹಾಗೂ ಗುಳೇದಗುಡ್ಡ ತಾಲೂಕಿನ ವಿವಿಧ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚನೆ ನೀಡಿದರು.

ಬಾದಾಮಿ ತಾಲೂಕಿನ ಮಾಲಗಿ ಗ್ರಾಮದಲ್ಲಿರುವ ಅಂಗನವಾಡಿ ಕಟ್ಟಡ ಕಾಮಗಾರಿ, ಉಗಲವಾಟ ಗ್ರಾಮದ ಬದು ನೀರು ನಿರ್ವಹಣೆ ಕಾಮಗಾರಿ, ಕುಳಗೇರಿ ಕ್ರಾಸ್‌ನಲ್ಲಿ ಎಂ.ಆರ್.ಎಫ್ ಹಾಗೂ ಘನತಾಜ್ಯ ನಿರ್ವಹಣೆ ಕಾಮಗಾರಿ ಹಾಗೂ ಗುಳೇದಗುಡ್ಡ ತಾಲೂಕಿನ ತೋಗುಣಸಿ ಗ್ರಾಮದ ನೀರು ಸಂಸ್ಕರಣಾ ಘಟಕದ ಕಾಮಗಾರಿಯನ್ನು ವೀಕ್ಷಣೆ ಮಾಡಿ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು. ಆಡಗಲ್ಲ ಗ್ರಾಮದ ಸರಕಾರಿ ಪ್ರೌಢಶಾಲೆಯ ಕಂಪೌಂಡ್ ಕಾಮಗಾರಿಯನ್ನು ಪರಿಶೀಲಿಸಿದರು. ಕುಳಗೇರಿ ಕ್ರಾಸ್‌ನಲ್ಲಿರುವ ನವೋದಯ ಶಾಲೆ ಮತ್ತು ಆಡಗಲ್ಲ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಮಕ್ಕಳ ಕಲಿಕೆಯಬಗ್ಗೆಪರೀಕ್ಷೆಮಾಡಿದರು. ಮಕ್ಕಳ ಬುದ್ದಿಮಟ್ಟವನ್ನು ಪ್ರತ್ಯೇಕವಾಗಿ ಗಮನಿಸಿ ಬೋಧನೆ ಮಾಡಲು ಶಿಕ್ಷಕರಿಗೆ ಸೂಚಿಸಿದರು. ನಂತರ ಮಕ್ಕಳೊಂದಿಗೆ ಸಂವಾದ ನಡೆಸಿ ಕುಂದು ಕೊರತೆಗಳನ್ನು ಆಲಿಸಿದರು. ಅಲ್ಲದೇ ಬಿಸಿ ಊಟದ ಕೋಣೆಗೆ ತೆರಳಿ ಆಹಾರದ ಗುಣಮಟ್ಟವನ್ನು ಪರಿಶೀಲಿಸಿದರು. ದಾಸ್ತಾನು ಕೋಣೆಗೆ ತೆರಳಿ ಆಹಾರ ಧಾನ್ಯಗಳ ಪರಿಶುದ್ದತೆಯನ್ನು ಗಣಮಿಸಿದರು.

ಭೇಟಿ ಸಮಯದಲ್ಲಿ ಬಾದಾಮಿ ತಾ.ಪಂ ಕಾಯಾನಿರ್ವಾಹಕ ಅಧಿಕಾರಿ ಸುರೇಶಕೊಕ್ಕರೆ,ಗುಳೇದ ಗುಡ್ಡತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಬಡಿಗೇರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ವಂದೆ, ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಅಶೋಕ ತೋಪಲಕಟ್ಟಿ ಸೇರಿದಂತೆ ಇತರರು ಇದ್ದರು.

---

## ಸಜ್ಜಲಶ್ರೀ ನರ್ಸಿಂಗ್ ವಿದ್ಯಾರ್ಥಿಗಳಿಂದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಗೃತಿ ಜಾಥಾ



**ಬಾಗಲಕೋಟೆ :** ಬಾಲಕಾರ್ಮಿಕ ಪದ್ದತಿ ತೊಡೆದು ಹಾಕುಬಲ್ಲಿ ಸಾಕಷ್ಟು ಪ್ರಗತಿ ಯಾಗಿದ್ದು, ಪ್ರಯತ್ನಗಳನ್ನು ಇನ್ನಷ್ಟು ವೇಗಗೋಳಿಸೋಣ ಎಂಬ ಧ್ಯೇಯ ವ್ಯಾಖ್ಯೆಯೊಂದಿಗೆ ವಿಶ್ವ ಬಾಲಕಾರ್ಮಿಕರ ವಿರೋಧಿ ದಿನಾಚರಣೆ ನಿಮಿತ್ಯ ಬಿ.ವಿ.ವಿ ಸಂಘದ ಸಜ್ಜಲಶ್ರೀ ನರ್ಶಿಂಗ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ಮಾಡಲಾಯಿತು.

ನಗರದ ಪ್ರತಿಷ್ಠಿತ ಬ.ವಿ.ವಿ. ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಚಿಕ್ಕಮಕ್ಕಳ ಆರೋಗ್ಯ ಶುಶ್ರೂಷಾ ವಿಭಾಗದಿಂದ ಹಮ್ಮಿಕೊಂಡ ವಿದ್ಯಾರ್ಥಿಗಳ ಜಾಗೃತಿ ಜಾಥಾ ಜಿಲ್ಲಾಡಳಿತ ಭವನದಿಂದ ಎಲ್. ಆಯ್.ಸಿ. ಆಫೀಸ್ ಸರ್ಕಲ್ ವರೆಗೆ ಜಾಥಾ ಕೈಗೊಳ್ಳಲಾಯಿತು. ನಂತರ ಪ್ರಾಚಾರ್ಯ ಡಾ॥ ದಿಲೀಪ್ ಎಸ್. ನಾಟೇಕರ್ ಅವರು ಜಾಥಾವನ್ನುಉದ್ದೇಶಿಸಿ ಮಾತನಾಡಿ ಬಾಲ ಕಾರ್ಮಿಕ ಪದ್ಧತಿಯು ಒಂದು ಸಂಕೀರ್ಣ ಸಮಸ್ಯೆಯಾಗಿದ್ದು, ಅದನ್ನು ಪರಿಹರಿಸಲು ಸಾಮೂಹಿಕ ಪ್ರಯತ್ನದ ಅಗತ್ಯವಿದೆ. ಮಕ್ಕಳ ಹಕ್ಕುಗಳನ್ನು ರಕ್ಷಿಸುವ ನೀತಿಗಳನ್ನು ಉತ್ತೇಜಿಸಲು ನಾವು ಒಟ್ಟಾಗಿ ಕೆಲಸ ಮಾಡಬೇಕೆಂದರು.

ಇದೇ ಸಂದರ್ಭದಲ್ಲಿ ಮಹಾವಿದ್ಯಾಲಯದ ಚಿಕ್ಕಮಕ್ಕಳ ಆರೋಗ್ಯ ಶುಶ್ರೂಷಾ ವಿಭಾಗದ ಪ್ರಾಧ್ಯಾಪಕರಾದ ಡಾ॥ ಪ್ರಶಾಂತ ಕುಲಕರ್ಣಿ, ಸಹ ಪ್ರಾಧ್ಯಾಪಕರಾದ .ಸಂತೋಷ ಸಜ್ಜನ ಹಾಗೂ ಉಪನ್ಯಾಸಕರಾದ ಶ್ರೀದೇವಿ ತೇಲಿ, ಕುಮಾರಿ. ರೇಣುಕಾ ಜಾಲಿಹಾಳ, ರಾಜಶೇಖರ ಕಾಬನೂರ ಉಪಸ್ಥಿತರಿದ್ದರು.

---

## ವಿಶ್ವ ತಂಬಾಕು ರಹಿತ ದಿನ: ತಂಬಾಕು ಮುಕ್ತ ಸಮಾಜ ನಿರ್ಮಾಣ ಜಾಗೃತಿಗಾಗಿ ನರ್ಸಿಂಗ ವಿದ್ಯಾರ್ಥಿಗಳಿಂದ ಕಿರುನಾಟಕ ಪ್ರದರ್ಶನ




**ಬಾಗಲಕೊಟೆ :** ಪ್ರತಿಷ್ಠಿತ ಬ.ವಿ.ವಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನಗಳ ಮಹಾವಿದ್ಯಾಲಯದ ಬಿ.ಎಸ್ಸಿ. ನರ್ಸಿಂಗ್ ಹಾಗೂ ಡಿಪ್ಲೋಮಾ ನರ್ಸಿಂಗ್ 3ನೇ ವರ್ಷದ ವಿದ್ಯಾರ್ಥಿಗಳಿಂದ ತಂಬಾಕು ಮುಕ್ತ ಸಮಾನಜ ನಿರ್ಮಾಣ ಕುರಿತು ಜಾಗೃತಿಗಾಗಿ ಕಿರುನಾಟಕಕ ಪ್ರದರ್ಶನ ಯಶಸ್ವಿಯಾಯಿತು.

ಮಹಾವಿದ್ಯಾಲಯದ ಸಮುದಾಯ ಆರೋಗ್ಯ ಶುಶ್ರೂಷಾ ವಿಭಾಗದ ವತಿಯಿಂದ ಭಗವತಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಂದು "ನಮ್ಮ ನಡೆ ತಂಬಾಕು ಮುಕ್ತ ಗ್ರಾಮದ ಕಡೆ" ಎಂಬ ಶೀರ್ಷಿಕೆಯಡಿ ತಂಬಾಕು ಸೇವನೆಯಿಂದಾಗುವ ದುಷ್ಪ-ರಿಣಾಮಗಳು ಮತ್ತು ಈ ಚಟದಿಂದ ಮುಕ್ತವಾಗುವ ಬಗೆಗೆ ಆರೋಗ್ಯ ಶಿಕ್ಷಣ ಕಾರ್ಯಕ್ರಮ ಹಾಗೂ ಕಿರು ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು, ಕಾರ್ಯಕ್ರಮವನ್ನು ಮಹಾವಿದ್ಯಾಲಯದ ಸಮುದಾಯ ಆರೋಗ್ಯ ಶುಶ್ರೂಷಾ ವಿಭಾಗದ ಮುಖ್ಯಸ್ಥೆ ಡಾ॥ ಶಿಲ್ಪಾ ಎನ್. ಕೂಗಲಿ ಅವರು ಉದ್ಘಾಟಿಸಿದರು, ಮಹಾವಿದ್ಯಾಲಯದ ಸಮುದಾಯ ಆರೋಗ್ಯ ಶುಶ್ರೂಷಾ ವಿಭಾಗದ ಉಪನ್ಯಾಸಕರಾದ ಜಗದೀಶ ಮ. ಹಿರೇಮಠ ಅವರು ತಂಬಾಕು ಸೇವನೆಯಿಂದ ಮುಖ್ಯವಾಗಿ ಕ್ಯಾನ್ಸರ್ ರೋಗ ಬರುವ ಸಾಧ್ಯತೆ ಹೆಚ್ಚು ಅಲ್ಲದೇ ಹೃದಯ ಸಂಬಂಧಿತ ರೋಗ, ಶ್ವಾಸಕೋಶ ರೋಗ, ಸಂತಾನೋತ್ಪತ್ತಿ ಸಂಬಂಧಿತ ರೋಗಗಳು ಕೂಡ ಉಂಟಾಗುವ ಸಾಧ್ಯತೆ ಹೆಚ್ಚಾಗಿದೆ. ಮನೆಯಲ್ಲಿ ಬೀಡಿ, ಸಿಗರೇಟ್ ಸೇವನೆಯಿಂದ ಹೊಗೆಯಿಂದ, ಸೇದದೇ ಹೊಗೆಯನ್ನು ಸೇವಿಸಿ ಮಕ್ಕಳಿಗೆ ಹಾಗೂ ಮಹಿಳೆಯರಲ್ಲಿ ಕೂಡ ಆರೋಗ್ಯ ಸಂಬಂಧಿತ ಸಮಸ್ಯೆಗಳು ಕಂಡು ಬರುವುದು ದುರದುಷ್ಟಕರ ಸಂಗತಿ. ಇಂದಿನ ಮಕ್ಕಳೇ ನಾಳಿನ ಆರೋಗ್ಯವಂತ ಪ್ರಜೆಗಳಾಗಬೇಕಾದರೆತಂಬಾಕುಸೇವನೆಯಿಂದ ದೂರವಿರಬೇಕು ಮತ್ತು ಮನೆಯಲ್ಲಿ ಎಲ್ಲ-ರಿಗೂ ತಿಳಿಸಿ ಹೇಳಬೇಕು ಎಂದರು. ನಂತರ ಮಹಾವಿದ್ಯಾಲಯದ ಬಿ.ಎಸ್ಸಿ. ನರ್ಸಿಂಗ್ ಹಾಗೂ ಡಿಪ್ಲೋಮಾ ನರ್ಸಿಂಗ್ 3ನೇ ವರ್ಷದ ವಿದ್ಯಾರ್ಥಿಗಳಿಂದ ತಂಬಾಕು ಮುಕ್ತ ಸಮಾಜ ನಿರ್ಮಿಸಲು ಕಿರುನಾಟಕ ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿ ಸರಕಾರಿ ಹಿರಿಯ ಪ್ರಾಥ-ಮಿಕ ಶಾಲೆ ಮುಖ್ಯ ಗುರುಮಾತೆ ಎಸ್.ಎಸ್. ಬಳೂಲದ ಹಾಗೂ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ರೇಣುಕರಾಜ ನಾಗಮ್ಮನವರ, ಡಾ॥ ರಾಜಶೇಖರ ಹಿರೇಗೌಡರ, ಉಪನ್ಯಾಸಕಿಂ-ಮರಾದ ಲಕ್ಷ್ಮಿ ಪಾಟೀಲ, ಕಿರಣ ಕಲಕಬಂಡಿ, ವಿಜಯಲಕ್ಷ್ಮಿ ಗೌಡರ, ಕುಮಾರಿ. ಶ್ರೀದೇವಿ ವನಗೇರಿ, ಕುಮಾರಿ. ಮಹಾಲಕ್ಷ್ಮಿ ಚಲವಾದಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಮತ್ತು ಸರಕಾರಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಎಲ್ಲ ಶಿಕ್ಷಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

## ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನ-2025

### ಬಾಲ ಕಾರ್ಮಿಕ ಮುಕ್ತ ಸಮಾಜ ನಿರ್ಮಾಣಕ್ಕೆ ಕಾಯ್ದೆಗಳ ಅರಿವು ಅಗತ್ಯ: ಶಾಸಕ ಆಸೀಫ್ (ರಾಜು) ಸೇಠ



**ಬೆಳಗಾವಿ :** ಬಾಲಕಾರ್ಮಿಕ ವಿರೋಧಿ ದಿನ ಅರ್ಥಪೂರ್ಣ ಆಚರಣೆಗೆ ಬಾಲ ಕಾರ್ಮಿಕ ಕಾಯ್ದೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಬೇಕು. ಕಾಯ್ದೆಗಳ ಬಗ್ಗೆ ಅರಿತುಕೊಂಡು ಬಾಲ ಕಾರ್ಮಿಕ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಶ್ರಮಿಸಬೇಕಿದೆ ಎಂದು ಬೆಳಗಾವಿ ಉತ್ತರ ವಿಧಾನಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ ಹೇಳಿದರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಮತ್ತು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಗುರುವಾರ (ಜೂ.12) ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನಾಚಾರಣೆ ಕಾರ್ಯಮದಲ್ಲಿ ಅವರು ಮಾತನಾಡಿದರು.

ಮಗುವಿನ ದೈಹಿಕ ಅಥವಾ ಮಾನಸಿಕ ಸಾಮರ್ಥ್ಯಕ್ಕೆ ಸೂಕ್ತವಲ್ಲದ ಯಾವುದೇ ಕೆಲಸ ಬಾಲ ಕಾರ್ಮಿಕ ಪದ್ಧತಿಯಾಗಿದೆ. ಬಾಲಕರನ್ನುಕೆಲಸದಲ್ಲಿತೊಡಗಿಸಿಕೊಂಡರೆ ಅದರ ಪರಿಣಾಮಗಳು ಅವರ ಬೆಳವಣಿಗೆ ಮತ್ತು ಭವಿಷ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತವೆ. ಮಕ್ಕಳು ಶಾಲೆಯಿಂದ ವಂಚಿತರಾಗದಂತೆ ಸರ್ಕಾರಿ ಶಾಲೆಯಲ್ಲಿ ಕಡ್ಡಾಯ ಹಾಜರಾತಿ, ಉಚಿತ ಪುಸ್ತಕಗಳು ಸೇರಿಂತೆ ಅಗತ್ಯ ಸೌಕರ್ಯಗಳನ್ನು ನೀಡಲಾಗುತ್ತಿದೆ. ಬಾಲಕರು ದುಶ್ಚಟಗಳಿಗೆ ಬಲಿಯಾಗದಂತೆ ಶಿಕ್ಷಕರು, ಪಾಲಕರು ನಿರಂತರ ತಿಳಿಹೇಳಬೇಕು ಎಂದು ಹೇಳಿದರು.

ಮಕ್ಕಳು ಆಟ-ಪಾಠದಲ್ಲಿ ತೊಡಗಿಕೊಂಡು ಬೆಳೆದರೆ ಮಾತ್ರ ಭವಿಷ್ಯದಲ್ಲಿ ಉನ್ನತ ಪ್ರಜೆಯಾಗಲು ಸಾಧ್ಯ. ಮಕ್ಕಳ ಭವಿಷ್ಯನ್ನು ರೂಪಿಸುವ ನಿಟ್ಟಿನಲ್ಲಿ ತಂದೆ-ತಾಯಿ, ಶಿಕ್ಷಕರು, ಕಾರ್ಮಿಕ ಇಲಾಖೆ ಅಧಿಕಾ-ರಿಗಳ ಪಾತ್ರ ಮಹತ್ವದಾಗಿದೆ ಎಂದು ಶಾಸಕ ಆಸೀಫ್ (ರಾಜು) ಸೇಠ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಮಾತನಾಡಿ ಬಾಲ ಕಾರ್ಮಿಕ ಪದ್ಧತಿ ಸಮಾಜದ ಅತೀ ದೊಡ್ಡ ಪಿಡುಗು, 6 ರಿಂದ 14 ವರ್ಷದ ಮಕ್ಕಳನ್ನು ಯಾವುದೇ ವ್ಯಾಪಾರ ಉದ್ಯಮ, ಅಂಗಡಿಗಳಲ್ಲಿ ಕೆಲಸಕ್ಕೆ ತೊಡಗಿಸಿಕೊಳ್ಳಬಾರದು. ಇದ-ರಿಂದ ತಂದೆ-ತಾಯಿ ಹಾಗೂ ಕೆಲಸಕ್ಕೆ ತೊಡಗಿಸಿಕೊಂಡವರಿಗೆಕಾಯ್ದೆಯಅನ್ವಯ ಕಾನೂನಾತ್ಮಕವಾಗಿ ಶಿಕ್ಷೆ ವಿಧಿಸಲಾಗುವುದು ಎಂದರು. ಕಾಯ್ದೆಯ ಅರಿವು ಎಲ್ಲರೂ ಪಡೆದುಕೊಂಡು ಶಾಲೆ ಬಿಟ್ಟ ಮಕ್ಕಳನ್ನು, ಕೆಲಸದಲ್ಲಿ ತೊಡಗಿಕೊಂಡು ಮಕ್ಕಳನ್ನು ಶಾಲೆಗೆ ಸೇರಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿ ವಹಿಸಿಕೊಳ್ಳಬೇಕು. ಗ್ರಾಮೀಣ ಮಟ್ಟದಲ್ಲಿ ಸಹ ಇನ್ನೂ ಕೆಲವೆಡೆ ಬಾಲ ಕಾರ್ಮಿಕ ಪದ್ಧತಿ ಕುರಿತು ಅಷ್ಟೊಂದು ಪರಿಣಾಮಕಾರಿ ಜಾಗೃತಿ ಇಲ್ಲದಂತಾಗಿದೆ. ಗ್ರಾಮೀಣ ಮಟ್ಟದ ಇನ್ನಷ್ಟು ಜಾಗೃತಿ ಕಾರ್ಯಕ್ರಮಗಳುಆಗಬೇಕಿದೆ.ತಂದೆತಾಯಿ ಕಡ್ಡಾಯವಾಗಿಮಕ್ಕಳಿಗೆಶಿಕ್ಷಣಒದಗಿಸಬೇಕು ಎಂಬ ಅರಿವು ಮೂಡಿಸಬೇಕಿದೆ ಎಂದು ಹೇಳಿದರು. ಈಗಾಗಲೇ ಕುಟುಂಬ ನಿರ್ವಹಣೆಗೆ ಸರ್ಕಾರ ಸಾಕಷ್ಟು ಸೌಲಭ್ಯ ನೀಡುತ್ತಿದೆ. ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಪ್ರಾಮಾಣಿಕವಾಗಿ ಸಹಾಯವಾಣಿಗೆ ಕರೆ ಮಾಡಿ ಸಹಕಾರ ನೀಡಬೇಕು. ಜಿಲ್ಲೆ, ರಾಜ್ಯ, ದೇಶದಲ್ಲಿ ಬಾಲ ಕಾರ್ಮಿಕ ಪದ್ಧತಿ ಮುಕ್ತವಾಗಿಸಲು ಎಲ್ಲರ ಸಹಕಾರ ಅತ್ಯಗತ್ಯ ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಅವರು ಮಾತನಾಡಿ ಬಾಲಕಾರ್ಮಿಕಮುಕ್ತಸಮಾಜ ನಿರ್ಮಾಣಕ್ಕೆ ಪ್ರತಿ ವರ್ಷ ಜೂನ್.12 ರಂದು ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನ ಆಚರಿಸಲಾಗುತ್ತಿದೆ. ಪ್ರಗತಿ ಸ್ಪಷ್ಟವಾಗಿದೆ ಆದರೆ ಇನ್ನೂ ಹೆಚ್ಚಿನದನ್ನು ಮಾಡಬೇಕಾಗಿದೆ. ಪ್ರಯತ್ನಗಳನ್ನು ವೇಗಗೊಳಿಸೋಣ ಎಂಬ ಘೋಷವಾಕ್ಯ ವಾಕ್ಯದೊಂದಿಗೆ "ದುಡಿಮೆ ಬೇಡ ಶಿಕ್ಷಣ ಬೇಕು" ಎಂಬ ಸಂದೇಶ ಸಮಾಜದಲ್ಲಿ ನೆಲೆಯೂರಬೇಕಿದೆ ಎಂದು ತಿಳಿಸಿದರು.

ಬಾಲ ಕಾರ್ಮಿಕರನ್ನು ರಕ್ಷಿಸಿ ಸರ್ಕಾರದ ನಿಯಮಾವಳಿಯ ಪ್ರಕಾರ ಶಿಕ್ಷಣ ಸವಲತ್ತು ಒದಗಿಸುವುದು ನಮ್ಮೆಲ್ಲರ ಕರ್ತವ್ಯ. ದೇಶದ ಹಲವೆಡೆ ಮಕ್ಕಳನ್ನು ಬಳಸಿಕೊಂಡು ಭಿಕ್ಷಾಟನೆ ಮಾಫಿಯಾ ಬೆಳೆಯುತ್ತಿದೆ. ಇವೆಲ್ಲವನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಕ್ಕಳ ರಕ್ಷಣೆಗೆ ಕಾನೂನು ಕಾಯ್ದೆ ಜಾರಿಗೆ ತರಲಾಗಿದೆ.

ಮಕ್ಕಳ ಮಾನಸಿಕ-ದೈಹಿಕ ಬೆಳವಣಿಗೆಗೆ ಯಾವುದೇರೀತಿಯತೊಂದರೆಯಾಗದಂತೆ ನೋಡಿಕೊಳ್ಳಬೇಕು. ಮಕ್ಕಳಿಗೆ ಸರಿಯಾದ ಮಾದರಿಯಲ್ಲಿ ಶಿಕ್ಷಣ, ಕ್ರೀಡೆ, ಕೌಶಲ್ಯ ತರಬೇತಿಗಳನ್ನು ನೀಡಿದರೆ ದೇಶ ವಿಶ್ವದಲ್ಲೇ ಇನ್ನಷ್ಟು ಬಲಾಢ್ಯ, ಶ್ರೇಷ್ಠ ರಾಷ್ಟ್ರವಾಗಲಿದೆ ಎಂದು ಜಿ.ಪಂ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ತಿಳಿಸಿದರು.

ಉಪ ಕಾರ್ಮಿಕ ಆಯುಕ್ತ ಅಮರೇಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ ಬಾಲ ಕಾರ್ಮಿಕ ಅನಿಷ್ಟ ಪದ್ಧತಿಯನ್ನು ಮುಕ್ತಗೊಳಿಸಲು ಪ್ರತಿಯೊಬ್ಬರೂ ಕೈ ಜೋಡಿಸಬೇಕು. ಬಾಲ ಕಾರ್ಮಿಕ ಪದ್ಧತಿ ಎಂಬ ಸಾಮಾಜಿಕ ಪಿಡುಗು ತೊಲಗಿಸಲು ಎಲ್ಲಾಇಲಾಖೆಅಧಿಕಾರಿಗಳುಮಾತ್ರವಲ್ಲದೇ ಸಾರ್ವಜನಿಕರು ಸಹ ಸಹಕಾರ ನೀಡಬೇಕು ಎಂದು ಕರೆ ನೀಡಿದರು.

**ಪಠ್ಯ ಪುಸ್ತಕಗಳ ವಿತರಣೆ:**

ಇದೇ ಸಂದರ್ಭದಲ್ಲಿ ಶಾಸಕ ಆಸೀಫ್ (ರಾಜು)ಸೇಠಜಿಲ್ಲೆಯವಿವಿಧಭಾಗಗಳಿಂದ ರಕ್ಷಣೆಗೊಂಡ ಬಾಲ ಕಾರ್ಮಿಕರಿಗೆ ಶಾಲಾ ಪಠ್ಯ ಪುಸ್ತಕಗಳನ್ನು ವಿತರಿಸಿದರು. ಬಳಿಕ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಮಕ್ಕಳ ರಕ್ಷಣೆ ಕುರಿತು ಪ್ರಮಾಣ ವಚನ ಸ್ವೀಕರಿಸಲಾಯಿತು.

ಸೈಬರ್ ಆರ್ಥಿಕ ಹಾಗೂ ಮಾದಕ ಅಪರಾಧಗಳ ಪೊಲೀಸ್ ಠಾಣಾಧಿಕಾರಿ ವೀರೇಶ ದೊಡ್ಡಮನಿ, ಸಹಾಯಕ ಕಾರ್ಮಿಕ ಆಯುಕ್ತದೇವರಾಜ,ಜಿಲ್ಲಾಬಾಲಕಾರ್ಮಿಕರ ಯೋಜನೆ ಯೋಜನಾ ನಿರ್ದೇಶಕಿ ಜ್ಯೋತಿ ಕಾಂತೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಜಿಲ್ಲಾ ಕಾರ್ಖಾನೆಗಳ ಉಪ ನಿರ್ದೇಶಕ ವೆಂಕಟೇಶ ರಾಠೋಡ, ಕಾರ್ಮಿಕ ಅಧಿಕಾರಿ ಮಲ್ಲಿಕಾರ್ಜುನ್ ಜೋಗುರು ಸೇ-ರಿದಂತೆ ಕಾರ್ಮಿಕ ನಿರೀಕ್ಷಕರು, ಕಾರ್ಮಿಕ ಇಲಾಖೆ ಸಿಬ್ಬಂದಿಗಳು, ವಿವಿಧ ಶಾಲೆಯ ಪಾಂಶುಪಾಲರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

---

## ಕೇಂದ್ರ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳೊಂದಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಚರ್ಚೆ




**ನವದೆಹಲಿ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಇಂದು ನವ ದೆಹಲಿಯ ಶಾಸ್ತ್ರಿ ಭವನದಲ್ಲಿ ಕೇಂದ್ರ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಬಂಧಿಸಿದಅನೇಕವಿಷಯಗಳುಸೇರಿದಂತೆಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಪೂರೈಕೆ ಆಗಬೇಕಿರುವ ಅಕ್ಕಿ, ಗೋಧಿ, ಅನುದಾನ ಹಾಗೂ ಅಂಗನವಾಡಿ ಈಖಖ ಗಳಲ್ಲಿರುವ ತಾಂತ್ರಿಕ ಸಮಸ್ಯೆಗಳ ಕುರಿತು ಸುಧೀರ್ಘ ಕಾಲ ಚರ್ಚೆ ನಡೆಸಲಾಯಿತು.

ಈ ವೇಳೆ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿಗಳಾದ ಅನಿಲ್ ಮಲ್ಲಿಕ್, ಹೆಚ್ಚುವರಿ ಕಾರ್ಯದರ್ಶಿಗಳಾದ ಪ್ರೀತಮ್ ಯಶವಂತ,ಜ್ಞಾನೇಶ್ ಭಾರತಿ,ಕಾರ್ಯದರ್ಶಿಗಳಾದ ಶ್ಯಾಮ್ಲಾ ಇಕ್ಬಾಲ್, ವಿಶೇಷ ಕರ್ತವ್ಯಾಧಿಕಾರಿ ನಿಶ್ಚಲ್ ಬಿ.ಎಚ್. ಉಪಸ್ಥಿತರಿದ್ದರು.

---

## ವ್ಯಾಸಮಧ್ವ ವಿದ್ಯಾಲಯದ ವಿಷ್ಣುಸಹಸ್ರನಾಮ ಭವನದಲ್ಲಿ ಭಾಗವತ ಸಪ್ತಾಹ



**ವಿಜಯಪುರ :** ನಗರದ ತೊರವಿ ರಸ್ತೆಯ ನಿಂಬರಗಿ ಬಡಾವಣೆಯ ಶ್ರೀ ವ್ಯಾಸಮಧ್ವ ಸಂಸ್ಕೃತ ವಿದ್ಯಾಲಯದ ಶ್ರೀ ವಿಷ್ಣುಸಹಸ್ರನಾಮ ಭವನದಲ್ಲಿ ಬೆಂಗಳೂರಿನ ಸುಧಾ ಪಂಡಿತರಾದ ವರದರಾಜ ಆದ್ಯ ಅವರು ಭಾಗವತ ಸಪ್ತಾಹವನ್ನು ಸುಗಮವಾಗಿ ಭಾಗವತ ಪ್ರವಚನವನ್ನು ಸುಂದರವಾಗಿ ಮನಮುಟ್ಟುವಂತೆ ಪ್ರವಚನದ ಮಧ್ಯದಲ್ಲಿ ಸುಮಧುರ ಕಂಠದಿಂದ ದೇವರ ಹಾಡುಗಳನ್ನು ಹಾಡಿ ಆಸಕ್ತರನ್ನು ಭಾವನಾ ಪರವಶಗೊಳಿಸಿದರು.

ಪುರಾಣಮಂಗಳದಂದುಮೊದಲಿಗೆಪಂ.ವರದರಾಜ ಆದ್ಯರು ಶ್ರೀ ವೆಂಕಟೇಶ ದೇವರಿಗೆ ಮಂಗಳಾರತಿ ಮಾಡಿದರು.ವಿದ್ಯಾಪೀಠದಧರ್ಮದರ್ಶಿಗಳಾದಪಂ. ವೇದನಿಧಿ ಆಚಾರ್ಯರು ಪಂ. ವರದರಾಜ ಆದ್ಯರ ಪರಿಚಯ ಮಾಡಿಕೊಟ್ಟರು. ವಿದ್ಯಾಪೀಠದ ಪರವಾಗಿ ಕಾಣಿಕೆ ಸಲ್ಲಿಸಲಾಯಿತು. ಭಾಗವತ ಸಪ್ತಾಹವನ್ನು ನಗರದ ಖ್ಯಾತ ಇಂಜಿನೀಯರ ಸಂತೋಷ ಕುಲಕರ್ಣಿ ಅವರ ಷಷ್ಠಬ್ಧಿ ಅಂಗವಾಗಿ ಹೋಮ, ಹವನ, ಶಾಂತಿ ಹಾಗೂ ಭಾಗವತ ಸಪ್ತಾಹವನ್ನು ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಸಂತೋಷ ಕುಲಕರ್ಣಿ ಹಾಗೂ ಡಾ.ಸವಿತಾ ಕುಲಕರ್ಣಿ ಅವರಲ್ಲದೇ ವಿದ್ಯಾಪೀಠದ ಪರವಾಗಿ ಡಾ. ಸಾವಳಗಿ, ಆನಂದ ಜೋಶಿ, ಆರ್.ಜಿ. ದೇಸಾಯಿ,ವಿಜಯೀಂದ್ರಮೊಖಾಶಿ,ಮಧ್ವಾಚಾರ್ಯ ಜೋಶಿ, ರಾಘವೇಂದ್ರಾಚಾರ್ಯ ಪುರೋಹಿತ, ಪಂ.ಸತ್ಯವರಾಚಾರ್ಯ, ಡಾ. ಸಿ.ಎಂ. ಕುಲಕರ್ಣಿ, ಶ್ರೀನಿವಾಸ ಕುಲಕರ್ಣಿ, ಪತ್ರಕರ್ತ ಬಾಬುರಾವ ಕುಲಕರ್ಣಿ ಮೊದಲಾದವರು ಭಾಗವಹಿಸಿದ್ದರು.

---

## ಮೀನುಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

**ಕೊಪ್ಪಳ :** ಮೀನುಗಾರಿಕೆ ಇಲಾಖೆ ವತಿಯಿಂದ 2025-26 ನೇ ಸಾಲಿಗೆ ವಿವಿಧ ಯೋಜನೆಯಡಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಇಲಾಖೆಯ ಜಿಲ್ಲಾ ವಲಯ ಯೋಜನೆಯ ವಿಶೇಷ ಘಟಕ ಯೋಜನೆ ಹಾಗೂ ಗಿರಿ-ಜನ ಉಪ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ರಾಜ್ಯ ವಲಯ ಯೋಜನೆಯಡಿ ಜಲಾಶಯ/ನದಿಭಾಗ/ಕೆರೆಗಳ ವ್ಯಾಪ್ತಿಯ ವೃತ್ತಿಪರ ಮೀನುಗಾರರಿಗೆ ಮೀನು ಹಿಡಿಯುವ ಬಲೆ, ಕೆರೆ/ಜಲಾಶಯಗಳ ಅಂಚಿನ ಕೊಳಗಳಲ್ಲಿ ಮೀನುಮರಿ ಪಾಲನೆಗೆ ನೆರವು, ಇಲಾಖಾ ಕೆರೆಗಳನ್ನು ಗುತ್ತಿಗೆ ಪಡೆದ ಮೀನುಗಾರರ ಸಹಕಾರ ಸಂಘ/ವ್ಯಕ್ತಿಗಳಿಗೆ ಮೀನುಮರಿ ಖರೀದಿಸಲು ನೆರವು ನೀಡಲಾಗುವುದು.

ಅರ್ಹ ಫಲಾನುಭವಿಗಳು ಆಯಾ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿಗೆ ಜೂನ್ 30 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೀನುಗಾ-ರಿಕೆ ಸಹಾಯಕ ನಿರ್ದೇಶಕರು ಕೊಪ್ಪಳ-7349711866, ಗಂಗಾವತಿ-9632338221, ಕುಷ್ಟಗಿ-9632338221 ಇವರನ್ನು ಸಂಪರ್ಕಿಸಬಹುದು ಎಂದು ಕೊಪ್ಪಳ ಮೀನುಗಾ-ರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## ಯುವಕ ನಾಪತ್ತೆ



**ಬೆಳಗಾವಿ :** ಬೆಳಗಾವಿ ಬಿಮ್ಸ್ ಕಾಲೇಜಿನಲ್ಲಿ ಮೊದಲನೇ ವರ್ಷದಲ್ಲಿ ಎಮ್.ಬಿ.ಬಿ.ಎಸ್ ವಿದ್ಯಾಭ್ಯಾಸ ಮಾಡುತಿದ್ದ 19 ವರ್ಷ ವಯಸ್ಸಿನ ಅಲನ ಕೃಷ್ಣ ಎಂಬ ಯುವಕ ಕಾಣೆಯಾಗಿದ್ದಾನೆ ಎಂದುಎ.ಪಿ.ಎಮ್.ಸಿಪೊಲೀಸ್‌ಠಾಣೆಯಲ್ಲಿಪ್ರಕರಣದಾಖಲಗಿರುತ್ತದೆ. ಕಾಣೆಯಾದ 19 ವರ್ಷ ವಯಸ್ಸಿನ ಯುವಕನು 5 ಅಡಿ ಎತ್ತರ, ಸಾದಗಪ್ಪು ಮೈಬಣ್ಣ, ಮೈಯಿಂದ ಸಧೃಢನಾಗಿದ್ದು, ಕನ್ನಡ, ಇಂಗ್ಲೀಷ್, ಹಿಂದಿ, ಮಲಯಾಳಂ ಭಾಷೆ ಮಾತನಾಡುತ್ತಾನೆ.

ಕಾಣೆಯಾದಯುವಕನಕುರಿತುಮಾಹಿತಿಸಿಕ್ಕಲ್ಲಿಎ.ಪಿ.ಎಮ್.ಸಿಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 0831- 2405250, 9480804106, 9480804047, ಗಳಗೆ ಅಥವಾ ಪೊಲೀಸ್ ಆಯುಕ್ತರು ಬೆಳಗಾವಿ ನಗರ ಹಾಗೂ ಎ.ಪಿ.ಎಂ.ಸಿ ಪೊಲೀಸ ಠಾಣೆ ಪೊಲೀಸ್ ಇನ್ಸಪೆಕ್ಟರ್ ರವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಹೆಚ್ಚಿನ ಸಂಖ್ಯೆಯ ಜನರು ಭಾಗಿಯಾಗುವಂತೆ ನೋಡಿಕೊಳ್ಳಿ – ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



**ಕೊಪ್ಪಳ :** ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಎಲ್ಲರ ಸಹಭಾಗಿತ್ವ ಬಹುಮುಖ್ಯವಾಗಿದ್ದು, ಸೂಕ್ತ ಪ್ರಚಾರ ಕೈಗೊಂಡು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗಿಯಾಗುವಂತೆ ನೋಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸುವ ಕುರಿತಂತೆ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಜೂನ್ 21 ರಂದು ಕೊಪ್ಪಳದ ತಾಲ್ಲೂಕು ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಏರ್ಪಡಿಸಲಾಗುವುದು.ಅಂದು ಬೆಳಿಗ್ಗೆ 6.30 ಗಂಟೆಗೆ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ಸಹಯೋಗದೊಂದಿಗೆ ಯೋಗಭ್ಯಾಸ ನಡೆಯಲಿದೆ. ಕ್ರೀಡಾಂಗಣದಲ್ಲಿ ವಿದ್ಯಾರ್ಥಿಗಳು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಪಾಲ್ಗೊಳ್ಳುವಂತಾಗಲು, ಆಯುಷ್ ಅಧಿಕಾರಿಗಳು, ಶಾಲಾ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ಮತ್ತು ವಸತಿ ಶಿಕ್ಷಣ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು. ಯೋಗ ದಿನಾಚರಣೆಗೆ ಆಗಮಿಸುವ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಲಘು ಉಪಹಾರದ ವ್ಯವಸ್ಥೆ ಕೈಗೊಳ್ಳುವಂತೆ ಜಿಲ್ಲಾ ಆಯುಷ್ ಅಧಿಕಾರಿಗೆ ಸೂಚನೆ ನೀಡಿದರು. ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯ ಪಾಲ್ಗೊಳ್ಳಬೇಕು. ಯೋಗಭ್ಯಾಸದ ನಂತರ ಪ್ರಜಾಪಿತ ಬ್ರಹ್ಮಕುಮಾರಿ ಅವರಿಂದ ಧ್ಯಾನದ ಮಹತ್ವ ಕುರಿತು ಉಪನ್ಯಾಸ ಇರಲಿದೆ. ಕಾರ್ಯಕ್ರಮ ಸ್ಥಳದಲ್ಲಿ ಅಗತ್ಯ ಕುಡಿಯುವ ನೀರು ಮತ್ತು ಯೋಗಾಸನಕ್ಕೆ ಸಂಬಂಧಿಸಿದಂತೆ ಅಗತ್ಯ ವ್ಯವಸ್ಥೆ ಮಾಡಬೇಕು. ಕಾರ್ಯಕ್ರಮ ದಿನದಂದು ಅಗತ್ಯ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಕುರಿತಂತೆ ಪೊಲೀಸ್ ಇಲಾಖೆಗೆ ಪತ್ರ ಬರೆದು ಕ್ರಮ ಕೈಗೊಳ್ಳಬೇಕು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಮಾಧ್ಯಮವರು, ವಕೀಲರು, ಪೊಲೀಸರು ಹಾಗೂ ಮಾಜಿ ಸೈನಿಕರಿಗೆ ಮಾಹಿತಿ ನೀಡಬೇಕು ಎಂದು ಆಯುಷ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಪಿ.ಬಿ.ಹಿರೇಗೌಡರ ಅವರು ಮಾತನಾಡಿ, ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಈ ಬಾರಿ "ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಆಚರಣೆ ಮಾಡಲಾಗುತ್ತಿದೆ. ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಯೋಗ ದಿನಾಚರಣೆ ನಡೆಸಲು ಎಲ್ಲ ರೀತಿಯ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶ ಪರಶುರಾಂ ಶೆಟ್ಟೆಪ್ಪನವರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಆಹಾರ ಇಲಾಖೆ ಉಪನಿರ್ದೇಶ ಸೋಮಶೇಖರ ಬಿರಾದಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ್, ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ.ಬಸವರಾಜ, ಕೊಪ್ಪಳ ಜಿಲ್ಲೆಯ ಆಯುಷ್ ವೈದ್ಯಾಧಿಕಾರಿಗಳಾದ ಡಾ.ಗುರುರಾಜ್ ಉಮಚಗಿ, ಡಾ.ಯಮನಪ್ಪ ಶಿರವಾರ, ಡಾ.ರಾಜಶೇಖರ ನಾರಿನಾಳ, ಡಾ. ಕವಿತಾ ಹೆಚ್.ಎಫ್., ಡಾ.ಶರಣಪ್ಪ ಹೈದ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಆಯುಷ್ ಇಲಾಖೆ ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಶರಣರ ಆದರ್ಶ ಪಾಲನೆ ಜತೆಗೆ ಮಕ್ಕಳಿಗೆ ಸಂಸ್ಕೃತಿ ಬಗ್ಗೆ ಅರಿವು ಮೂಡಿಸಿ: ಶ್ರೀ ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ



**ಕೊಪ್ಪಳ :** ಶರಣರ ತತ್ವ ಅದರ್ಶಗಳನ್ನು ಪಾಲನೆ ಮಾಡುವ ಜೊತೆಗೆ ಮಕ್ಕಳಿಗೆ ನಮ್ಮ ಸಂಸ್ಕೃತಿ ಮತ್ತು ಅಚಾರ ವಿಚಾರಗಳ ಬಗ್ಗೆ ಅರಿವು ಮೂಡಿಸಿ ಸಮಾಜವನ್ನು ಜಾಗೃತಿಗೊಳಿಸಿ ಎಂದು ಮೈನಳ್ಳಿ-ಬಿಕನಳ್ಳಿ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಬುಧವಾರ ಸಂಜೆ ನಗರದ ಶ್ರೀ ರೇಣುಕಾಚಾರ್ಯ ಭವನದಲ್ಲಿ ಹುಣ್ಣಿಮೆಯ ಅರಿವು-ಆಚಾರ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ಶರಣರು ವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಜೊತೆಗೆ ಉತ್ತಮ ಸಂಸ್ಕೃತಿ ಮತ್ತು ಧರ್ಮವನ್ನು ಪಾಲನೆ ಮಾಡುವಂತೆ ಹೇಳಿ ಹೋಗಿದ್ದಾರೆ ಇಂಥಹ ಶರಣರ ಪರಂಪರೆಯನ್ನು ಹೊಂದಿರುವ ನಾವೆಲ್ಲರು ಅವರ ತತ್ವ ಅದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ಸಮಾಜವನ್ನು ನಿರ್ಮಾಣ ಮಾಡಲು ಮುಂದಾಗಬೇಕಾಗಿದೆ ಎಂದರು.

ಈ ಬಾರಿ ಹುಣ್ಣಿಮೆಯ ಅರಿವು-ಆಚಾರ ಕಾರ್ಯಕ್ರಮದಲ್ಲಿ ತೊಗಲು ಬೊಂಬೆ ಆಟ ಕಲಾವಿದರನ್ನು ಕರೆಸಿ, ಪರ್ದಶನ ಏರ್ಪಡಿಸಿ ಅವರನ್ನು ಪ್ರೋತ್ಸಾಹಿಸುವ ಕಾರ್ಯಮಾಡಿದ್ದಕ್ಕೆ ಖುಷಿಯ ವಿಚಾರವಾಗಿದೆ ಎಂದರು.

ಇದೇ ವೇಳೆ ಬೇವನಹಳ್ಳಿ ರಂಗ ಗಂಗೋತ್ರಿ ಕಲತಂಡ ಕಲಾವಿದರಾದ ಸುರೇಂದ್ರಸ್ವಾಮಿ ಅವರು 'ಒಂದೇ ಭಾರತ ಕನಸು' ಎಂಬ ತೊಗಲು ಬೊಂಬೆ ಆಟದ ಪ್ರಕಾರವನ್ನು ಪ್ರರ್ದಶಿಸಿದರು. ನಂತರ ಮಹೇಶ್ವರಸ್ವಾಮಿ ಶೇಖರಯ್ಯ ಮಳಿಮಠ ಅವರು ಪ್ರಸಾದ ವ್ಯವಸ್ಥೆ ಮಾಡಿದ್ದರು.

ಕಾರ್ಯಕ್ರಮದಲ್ಲಿ ಜಂಗಮ ಸಮಾಜ ಅಧ್ಯಕ್ಷರಾದ ಹಂಪಯ್ಯ ಮೆತಗಲ್ಲ, ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಬಸಯ್ಯ ಹಿರೇಮಠ, ಮುಖಂಡರಾದ ನೀಲಕಂಠಯ್ಯ ಹಿರೇಮಠ, ಶಿವಕುಮಾರ್ ಹಿರೇಮಠ, ಗವಿಸಿದ್ದಯ್ಯ ಲಿಂಗಬಸಯ್ಯನಮಠ, ಪಂಪಯ್ಯ ಹಿರೇಮಠ, ನಾಗಭೂಷಣ ಸಾಲಿಮಠ, ಮರಿಶಾಂತವೀರ, ಲಲಿತಾ ಹಿರೇಮಠ, ಜಯಶ್ರೀ ಹಿರೇಮಠ, ಸವಿತಾ ಹಿರೇಮಠ, ಲಲಿತಾ ಸಾಲಿಮಠ ಸೇರಿದಂತೆ ಇನ್ನೂ ಅನೇಕ ಜಂಗಮ ಸಮಾಜದವರು ಇದ್ದರು.

ಕಾರ್ಯಕ್ರಮದ ಮೊದಲಿಗೆ ಶಿವಲೀಲಾ ಪ್ರಾರ್ಥನೆಗೈದರು, ಸಿದ್ದು ಹಿರೇಮಠ ಸ್ವಾಗತಿಸಿ, ಜಗದೀಶ್ ಹಿರೇಮಠ ನಿರೂಪಿಸಿ, ಕಾರ್ಯದರ್ಶಿ ಬಸಯ್ಯ ಹಿರೇಮಠ ವಂದಿಸಿದರು.

# ಸಾವಯವ ಪದ್ಧತಿಯು ಕೃಷಿಯನ್ನು ಲಾಭದಾಯಕವಾಗಿಸಲು ಸಹಕಾರಿಯಾಗಲಿದೆ: ಜಿಲ್ಲಾಧಿಕಾರಿ ನಲಿನ್ ಅತುಲ್



**ಕೊಪ್ಪಳ :** ನೈಸರ್ಗಿಕವಾಗಿ ಬೆಳೆದ ಬೆಳೆಗಳಿಗೆ ಬಹಳಷ್ಟು ಬೇಡಿಕೆಯಿದ್ದು, ಸಾವಯವ ಪದ್ಧತಿಯು ಕೃಷಿಯನ್ನು ಲಾಭದಾಯಕವಾಗಿಸಲು ರೈತರಿಗೆ ಸಹಕಾರಿಯಾಗಲಿದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಗಂಗಾವತಿಯ ಕೃಷಿ ವಿಜ್ಞಾನ ಕೇಂದ್ರ ಮತ್ತು ಕೊಪ್ಪಳದ ಕೃಷಿ ತಂತ್ರಜ್ಞರ ಸಂಸ್ಥೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 2025-26ನೇ ಸಾಲಿನ ಜಿಲ್ಲಾ ಮಟ್ಟದ ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನದಡಿ ಸಿ.ಆರ್.ಪಿ & ಬಿ.ಆರ್.ಪಿ.ಗಳಿಗೆ ತರಬೇತಿ ಹಾಗೂ ಕಾರ್ಯಾಗಾರ ಮತ್ತು ರೈತ-ವಿಜ್ಞಾನಿ ಚರ್ಚಾಗೋಷ್ಠಿ ಉದ್ಘಾಟಿಸಿ ಮಾತನಾಡಿದರು.

ದುಬಾರಿಯಾದಂತಹ ರಸಗೊಬ್ಬರಗಳ ಬಳಕೆಯಿಂದ ಕೃಷಿ ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಳ್ಳುವುದರ ಜೊತೆಗೆ, ಇದರಲ್ಲಿ ರೋಗ ಮತ್ತು ಕೀಟಬಾಧೆ ಹೆಚ್ಚಾಗಿ ಕಾಡಲಿದೆ. ಕೃಷಿಯಲ್ಲಿ ರಸಾಯನಿಕಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬಳಕೆ ಮಾಡಿದ ಕೃಷಿ ಪದಾರ್ಥಗಳಿಗೆ ಹೊರ ದೇಶಗಳಲ್ಲಿ ಬೇಡಿಕೆಯಿಲ್ಲ. ರಸಾಯನಿಕ ಕೃಷಿಯಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಜೊತೆಗೆ ಭೂಮಿಯ ಫಲವತ್ತತೆಯೂ ಸಹ ಹಾಳಾಗುತ್ತದೆ. ನಮ್ಮ ಕೃಷಿಯ ಪದ್ಧತಿಯಲ್ಲಿ ರಸಾಯನಿಕ ಗೊಬ್ಬರಗಳಿಗೆ ಕಡಿವಾಣ ಹಾಕುವುದರ ಮೂಲಕ ಸಾವಯವ ಕೃಷಿಗೆ ಹೆಚ್ಚಿನ ಅದ್ಯತೆ ನೀಡಬೇಕು. ಜಿಲ್ಲೆಯಲ್ಲಿ ರೇಷ್ಮೆ, ತೋಟಗಾರಿಕೆ, ಪಶುಪಾಲನೆ, ಮೀನುಗಾರಿಕೆಗೆ ಉತ್ತೇಜನ ನೀಡುವುದರ ಜೊತೆಗೆ ಜಿಲ್ಲೆಯಲ್ಲಿ ಸಮಗ್ರ ಸಾವಯವ ಕೃಷಿ ಪದ್ಧತಿ ಜಾರಿಗೆ ಎಲ್ಲರೂ ಸಹಕರಿಸಬೇಕು ಎಂದರು.

ಮುಂಬರುವ ದಿನಗಳಲ್ಲಿ ಜಿಲ್ಲೆಯ 1.50 ಲಕ್ಷ ಹೆಕ್ಟರ್ ತೋಟಗಾರಿಕೆ ಪ್ರದೇಶದ ಅವೃದ್ಧಿಗಾಗಿ ಯೋಜನೆ ರೂಪಿಸಲಾಗಿದ್ದು, ಇದರಿಂದ ರೈತರ ಆದಾಯ ಹೆಚ್ಚಾಗಲಿದೆ. ತೋಟಗಾರಿಕೆ ಟೆಕ್

ಪಾರ್ಕ್ ಹಾಗೂ ರೈಸ್ ಪಾರ್ಕ್ ಸ್ಥಾಪನೆಯಿಂದಾಗಿಯೂ ಜಿಲ್ಲೆಯ ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರಗಳಲ್ಲಿ ಹೆಚ್ಚಿನ ಅಭಿವೃದ್ಧಿಯಾಗಲಿದೆ. ಇದರೊಂದಿಗೆ ಇಲ್ಲಿನ ತೋಟಗಾರಿಕೆ ಬೆಳೆಗಳನ್ನು ಒಂದು ಬ್ರ್ಯಾಂಡ್ ಮೂಲಕ ರಫ್ತು ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಅವರು ಮಾತನಾಡಿ, ಕೃಷಿಯಲ್ಲಿ ಹೆಚ್ಚನ ಪ್ರಮಾಣದ ರಸಾಯನಿಕ ಬಳಕೆಯಿಂದಾಗಿ ಭೂಮಿ ಫಲವತ್ತತೆಯನ್ನು ಕಳೆದುಕೊಳ್ಳುತ್ತದೆ. ಕೊಪ್ಪಳ ಜಿಲ್ಲೆಯಲ್ಲಿ 4.60 ಲಕ್ಷ ಹೆಕ್ಟರ್ ಕೃಷಿ ಭೂವಿವಿದ್ದು, ಇದರಲ್ಲಿ ಕೇವಲ 4 ಸಾವಿರ ಹೆಕ್ಟರ್ ಪ್ರದೇಶದಲ್ಲಿ ಮಾತ್ರ ಸಾವಯ ಪದ್ಧತಿಯಲ್ಲಿ ಕೃಷಿ ಮಾಡಲಾಗುತ್ತಿದೆ. ಸಾವಯವ ಕೃಷಿ ಹೆಚ್ಚಿನ ಹಣ ಬೇಕಾಗಿಲ್ಲ ಹಾಗೂ ಅತೀಯಾದ ಶ್ರಮದ ಅವಶ್ಯಕತೆಯು ಇರುವುದಿಲ್ಲ. ರೈತರಿಗೆ ತಾಳ್ಮೆ ಒಂದಿದ್ದರೆ ಸಾಕು ನೈಸರ್ಗಿಕ ಪದ್ಧತಿಯಲ್ಲಿ ಆರೋಗ್ಯಕರ ಬೆಳೆಗಳನ್ನು ಸುಲಭವಾಗಿ ಬೆಳೆಯಬಹುದು. ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನದಡಿ ಸಿ.ಆರ್.ಪಿ & ಬಿ.ಆರ್.ಪಿ.ಗಳು ಸಾವಯವ ಕೃಷಿಯ ಅಳವಡಿಕೆಗೆ ರೈತರ ಮನವಲಿಸಿ ಜಿಲ್ಲೆಯಲ್ಲಿ ಸಾವಯವ ಕೃಷಿ ವಲಯವನ್ನು ಹೆಚ್ಚಿಸಲು ಕ್ರಮ ವಹಿಸಬೇಕು ಎಂದರು.

ಸನ್ಮಾನ: ರಾಯಚೂರಿನ ಕೃಷಿ ವಿಶ್ವವಿದ್ಯಾಲಯದಿಂದ ಇತ್ತೀಚೆಗೆ ಗೌರವ ಡಾಕ್ಟರೇಟ್ ಪಡೆದ ನೈಸರ್ಗಿಕ ಕೃಷಿಯನ್ನು ಅಳವಡಿಸಿಕೊಂಡಿರುವ ಪ್ರಗತಿಪರ ರೈತರಾದ ಕುಷ್ಟಗಿ ತಾಲ್ಲೂಕಿನ ಮದಲಗಟ್ಟಿಯ ದೇವೇಂದ್ರಪ್ಪ ಬಳೂಟಗಿ ಅವರಿಗೆ ಸನ್ಮಾನಿಸಲಾಯಿತು.

# ಎಂ.ಡಿ. ಆಸೀಫ್ ಹುಸೇನ್ ಜಿಲ್ಲಾ ಯುವ ಕಾಂಗ್ರೆಸ್ ಉಸ್ತುವಾರಿ



**ಗಂಗಾವತಿ :** ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಉಸ್ತುವಾರಿಯನ್ನಾಗಿ ಗಂಗಾವತಿ ವಿಧಾನಸಭಾ ಕ್ಷೇತ್ರದ ಯುವ ಮುಖಂಡರ ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಎಂ.ಡಿ ಆಸೀಫ್ ಹುಸೇನ್ ಅವರನ್ನು ನೇಮಕ ಮಾಡಿ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ಆದೇಶ ಹೊರಡಿಸಿದೆ.

ಈ ಹಿಂದೆ ಯುವ ಕಾಂಗ್ರೆಸ್ ನಲ್ಲಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷನಾಗಿ ನಂತರ 2025 ರಲ್ಲಿ ನಡೆದ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಜಯಗಳಿಸಿ ರಾಜ್ಯ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ. ಪಕ್ಷದ ಪರ ಹಲವಾರು ಹೋರಾಟ ಪ್ರತಿಭಟನೆಗಳನ್ನು ಮಾಡುವ ಮೂಲಕ ಜಿಲ್ಲೆಯಲ್ಲಿ ಯುವ ನಾಯಕನಾಗಿ ಗುರುತಿಸಿ ಕೊಂಡಿದ್ದ ಇವರನ್ನು ರಾಜ್ಯಯುವಕಾಂಗ್ರೆಸ್‌ಚಿತ್ರದುರ್ಗ ಜಿಲ್ಲಾ ಉಸ್ತುವಾರಿಯನ್ನಾಗಿ ನೇಮಕ ಮಾಡುವ ಮೂಲಕ ಯುವ ನಾಯಕತ್ವಕ್ಕೆ ಅವಕಾಶ ನೀಡಿರುವುದಕ್ಕೆ ಕಾರ್ಯಕರ್ತರು ಹರ್ಷ ವ್ಯಕ್ತಪಡಿಸಿದ್ದಾರೆ.

# ವಚನ ಸಾಹಿತ್ಯ ಮನೆ ಮನೆಯಲ್ಲಿ ಮೊಳಗಲಿ



**ಇಳಕಲ್ :** ಬಸವಾದಿ ಶರಣರು ರಚಿಸಿದ ವಚನ ಸಾಹಿತ್ಯ ಮನೆ ಮನೆಗಳಲ್ಲಿ ಮೊಳಗಲಿ ಬೆಳಗಲಿ ಎಂದು ನೀಲಮ್ಮ ಬಾದಿಮನಾಳ ಹೇಳಿದರು

ಇಲ್ಲಿನ ಯುಕೆಪಿ ಉದ್ಯಾನವನದಲ್ಲಿ ನಡೆದ ಮನೆ ಮನೆಗಳಲ್ಲಿ ವಚನ ಸೌರಭ ಕಾರ್ಯಕ್ರಮದಲ್ಲಿ ಅನುಭಾವ ನೀಡಿದ ಅವರು ಶರಣರ ಒಂದೊಂದು ವಚನಗಳು ಒಂದೊಂದು ಜೀವನದ ಪಾಠಗಳನ್ನು ಕಲಿಸುತ್ತವೆ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಬಾಳು ಭವ್ಯವಾಗುತ್ತದೆ ಎಂದು ಹೇಳಿದರು

ಸಾನಿಧ್ಯವನ್ನುಗುರುಮಹಾಂತಶ್ರೀಗಳು ಮತ್ತು ಶಿರೂರ ನಿಸರ್ಗ ಕೇಂದ್ರದ ಸಂಚಾಲಕ ಡಾ ಬಸವಲಿಂಗ ಮಹಾಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿದರು.

ಇದೇ ಸಮಯದಲ್ಲಿ ನಗರಸಭೆ ಅಧ್ಯಕ್ಷೆ ಸುಧಾರಾಣಿ ಸಂಗಮ ಹುನಗುಂದ ವಿಎಂಎಸ್ ಆರ್ ಕಾಲೇಜು ನಿವೃತ್ತ ಪ್ರಾಚಾರ್ಯೆ ಶಶಿಕಲಾ ಮಠ , ಎನ್ ಎಸ್ ಹಾದಿಮನಿ,ಜಾಗತಿಕ ಲಿಂಗಾಯತ ಮಹಾಸಭಾದ ತಾಲೂಕು ಅಧ್ಯಕ್ಷೆ ಸವಿತಾ ಗೊಂಗಡಶೆಟ್ಟಿ ಕಸಾಪ ತಾಲೂಕು ಮಾಜಿ ಅಧ್ಯಕ್ಷ ಸಂಗಣ್ಣ ಗದ್ದಿ, ಇವರನ್ನು ಸತ್ಕರಿಸಲಾಯಿತು ವೇದಿಕೆಯಲ್ಲಿ ಕದಳಿ ವೇದಿಕೆ ಅಧ್ಯಕ್ಷೆ ಸುಜಾತ ಅಂಗಡಿ, ಅಕ್ಕನಬಳಗದ ಸುವರ್ಣ ಗೊಂಗಡಶೆಟ್ಟಿ ಸುನೀತಾ ಅಂಗಡಿ ಮಹಾಂತೇಶ ವಾಲಿ ಉಪಸ್ಥಿತರಿದ್ದರು.

**ವರದಿ ನಬಿ ಹುಣಚಗಿ**

# ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗಾಗಿ ಅರ್ಜಿ ಆಹ್ವಾನ

**ಜಮಖಂಡಿ :** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗಾಗಿ ಶೈಕ್ಷಣಿಕ ಹಿತದೃಷ್ಟಿಯಿಂದ ಮೆಟ್ರಿಕಪೂರ್ವ ಹಾಗೂ ಮೆಟ್ರಿಕ್ ನಂತರದ ಪರಿಶಿಷ್ಟಪಂಗಡದ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡಲಾಗುತ್ತಿದೆ. ಸನ್ 2025-26 ನೇ ಸಾಲಿನಿಂದ ಮೆಟ್ರಿಕಪೂರ್ವ (9 ಮತ್ತು 10 ನೇ ತರಗತಿ) ಹಾಗೂ ಮೆಟ್ರಿಕ್ ನಂತರದ ಕೋರ್ಸಗಳಲ್ಲಿ ಪ್ರವೇಶಕ್ಕಾಗಿ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಭಾರತ ಸರ್ಕಾರ ಅಭಿವೃದ್ಧಿ ಪಡಿಸಿರುವ ತತ್ರಾಂಶದಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು (ಗ್ರೇಡ್-1) ಸಮಾಜ ಕಲ್ಯಾಣ ಇಲಾಖೆ ಜಮಖಂಡಿ ಇವರ ಕಛೇರಿಗೆ ಸಂಪರ್ಕಿಸಬಹುದು. ದೂರವಾಣಿ 9480843061 ಈ ಸಂಖ್ಯೆಗೆ ಸಂಪರ್ಕಿಸಲು ತಿಳಿಸಿದೆ.

# ಕಾರ ಹುಣ್ಣಿಮೆ ಎತ್ತುಗಳ ಕರಿ ಆಚರಣೆ



**ಬಸವನಬಾಗೇವಾಡಿ :** ಪಟ್ಟಣದ ಗಣಪತಿ ಚೌಕಿನ ರೈತರು ಸಂಭ್ರಮದಿಂದ ಕಾರುಣ್ಣಿಮೆಯನ್ನು ಎತ್ತುಗಳ ಸ್ಪರ್ಧೆಯಿಂದ ಆಚರಿಸಿದರು ಕರಿ ಎತ್ತು ಬಿಳಿ ಎತ್ತು ಕೆಂದ ಎತ್ತುಗಳನ್ನು ಸ್ಪರ್ಧೆಗೆ ಬಿಡಲಾಗುವುದು ಯಾವ ಎತ್ತು ಸ್ಪರ್ಧೆಯಲ್ಲಿ ಪ್ರಥಮ ಬರುತ್ತದೆ.

ಆ ಬಣ್ಣದ ಕಾಳುಗಳು ರೈತರು ಹೆಚ್ಚಿನ ಪ್ರಮಾಣದಲ್ಲಿ ಬೆಳೆಯುತ್ತಾರೆ ಎಂಬ ನಂಬಿಕೆ ದೂರದಲ್ಲಿ ಒಂದು ಬೇವಿನ ಸರಕ್ಕೆ ಕೊಬ್ಬರಿಯನ್ನು ಕಟ್ಟಿರುತ್ತಾರೆ ಆ ಕೊಬ್ಬರಿಯನ್ನು ಯಾವ ಎತ್ತಿನ ಮಾಲೀಕ ಜಿಗಿದು ತೆಗೆದುಕೊಳ್ಳುತ್ತಾನೆ ಅವನಿಗೆ ಕೊನೆಯಲ್ಲಿ ಬಹುಮಾನವನ್ನು ಕೊಡಲಾಯಿತು.

ಈ ಸಂದರ್ಭದಲ್ಲಿ ಶ್ರೀ ಪಂಚಾಕ್ಷರಿ ಕಾಳಹಸ್ತೇಶ್ವರ ಮಠ ಬಸಪ್ಪ ಹಾರಿವಾಳ ಅಶೋಕ್ ಗುಳ್ಳೆದ ಗುರಪ್ಪ ತುಂಬಗಿ ಶಿವಪ್ಪ ಬುರ್ಲಿ ಮಂಜು ಸುಂಕದ ಮಾಂತೇಶ್ ಹಂಜಗಿ ಅಶೋಕ್ ಮುಳವಾಡ ಮುಂತಾದ ರೈತರು ಭಾಗವಹಿಸಿದ್ದರು.

# ಪೊಲೀಸ್ ಆಯುಕ್ತ ಬಿ. ದಯಾನಂದ ಅಮಾನತು ಆದೇಶ ವಾಪಸು ಪಡೆಯಲು ಆಗ್ರಹ



**ವಿಜಯಪುರ :** ಬೆಂಗಳೂರಿನ ಪೊಲೀಸ್ ಆಯುಕ್ತ ಬಿ. ದಯಾನಂದ ಅವರನ್ನು ಅಮಾನತುಗೊಳಿಸಿರುವ ಸರ್ಕಾರದಆದೇಶವನ್ನುಕೂಡಲೇಹಿಂಪಡೆಯುವಂತೆ ಅಖಿಲ ಭಾರತೀಯ ವಾಲ್ಮೀಕಿ ಸಮಾಜ ಸೇವಾ ಸಂಘದ ವತಿಯಿಂದ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಬಟಗಿ ಮಾತನಾಡಿ, ಬೆಂಗಳೂರಿನಲ್ಲಿ ವಿಧಾನಸೌಧ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ತಂಡ ಗೆಲುವಿನ ಹಿನ್ನೆಲೆಯಲ್ಲಿ ಆರ್.ಸಿ.ಬಿ. ತಂಡದ ಸದಸ್ಯರಿಗೆ ಸನ್ಮಾನ ಸಂಭ್ರಮಾಚರಣೆ ವೇಳೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಕಾರ್ಯಕ್ರಮ ಮಾಡಲು ಅನುಮತಿಯನ್ನು ನಿರಾಕರಿಸಿದ್ದರೂ ಕೂಡ, ಪ್ರಭಾವಿ ನಾಯಕರ ಬೆಂಬಲದೊಂದಿಗೆ ಆರ್‌ಸಿಬಿ ತಂಡದ ಮುಖ್ಯಸ್ಥರು ಆಟಗಾರರನ್ನುಬೆಂಗಳೂರಿಗೆಕರೆಸಿದ್ದರಿಂದಲಕ್ಷಾಂತರ ಅಭಿಮಾನಿಗಳು ಜಮಾಯಿಸಿ, ಕಾಲ್ತುಳಿತದಲ್ಲಿ 11 ಜನ ಅಮಾಯಕರು ಸಾವನ್ನಪ್ಪಿದ್ದಾರೆ. 11 ಜನರಿಗೆ ಸರ್ಕಾರದಿಂದ 50 ಲಕ್ಷ ಪರಿಹಾರ ನೀಡಬೇಕು. ಈ ಘಟನೆಗೆ ಪೊಲೀಸ್ ಆಯುಕ್ತರನ್ನು ಬಲಿಪಶು ಮಾಡಿ ಅಮಾನತುಗೊಳಿಸಿರುವುದು ತೀವ್ರ ಖಂಡನೀಯ ಎಂದರು.

ಬಿ.ದಯಾನಂದ ಅವರು ಶೋಷಿತ ವರ್ಗದ, ದಮನಿತ ವರ್ಗದವರಾಗಿದ್ದಾರೆ. ಇವರು ರಾಜ್ಯದಲ್ಲಿ ತಮ್ಮದೆ ಆದ ಛಾಪನ್ನು ಮೂಡಿಸಿದ್ದಾರೆ. ಇವರ ಅಮಾನತ್ತು ಆದೇಶವನ್ನು ಸರ್ಕಾರ ಕೂಡಲೇ ವಾಪಸು ಪಡೆಯಬೇಕು.

ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಉಗ್ರವಾದಹೋರಾಟವನ್ನುಹಮ್ಮಿಕೊಳ್ಳಬೇಕಾಗುತ್ತದೆ ಎಂದು ಅಖಿಲ

ಭಾರತೀಯ ವಾಲ್ಮೀಕಿ ಸಮಾಜ ಸೇವಾ ಸಂಘದ ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಮಹಾದೇವ ಕಾಂಬಳೆ, ಶ್ರೇಯಸ್ ತಳವಾರ, ಲಕ್ಷ ?ಮಣ ದೇವಾಪೂರ, ಅಮೀನ ಮುಲ್ಲಾ ಸೇರಿದಂತೆ ಮುಂತಾದವರು ಇದ್ದರು.

# ನಿಗಮದ ಯೋಜನೆಗಳಿಗೆ ಅರ್ಜಿ ಆಹ್ವಾನ

**ಬಾಗಲಕೋಟ :** ಪ್ರಸಕ್ತ ಸಾಲಿನ ಆರ್ಥಿಕ ವರ್ಷದಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ, ಸ್ವಾವಲಂಬಿ ಸಾರಥಿ ಸೇರಿದಂತೆ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನೆ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಮತ್ತು 2024-25 ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ನಲ್ಲಿ ಜುಲೈ 2 ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ದೂಸಂ.080-29904350, 29904268 ಸಂಪರ್ಕಿಸ ಎಂದು ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕ ಎಂ.ಜಿ.ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಬಾಗಲಕೋಟೆ :** ಕೃಷಿ ವಿ.ವಿ ಧಾರವಾಡದ 2025-26ನೇ ಕೃಷಿ ಮೇಳದ ಪ್ರಯುಕ್ತ ಬಾಗಲಕೋಟ ಜಿಲ್ಲೆಯ ಶ್ರೇಷ್ಠ ಕೃಷಿಕ ಮತ್ತು ಶ್ರೇಷ್ಠ ಕೃಷಿ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ರೈತರು ಮತ್ತು ರೈತ ಮಹಿಳೆಯರು ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರ ಕಛೇರಿಗೆ ಭೇಟಿ ನೀಡಿ ಅಥವಾ ಕೃಷಿ ವಿಜ್ಞಾನ ಕೇಂದ್ರದ ಅಧಿಕೃತ ವೆಬ್‌ಸೈಟ್ www.kvkbagalkot.com ನಿಂದ ಅರ್ಜಿ ಪಡೆದು ಸೂಕ್ತ ಮಾಹಿತಿಯನ್ನು ಭರ್ತಿ ಮಾಡಿ ಆಯಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಮೂಲಕ ಕೃಷಿ ವಿಜ್ಞಾನ ಕೇಂದ್ರ ಬಾಗಲಕೋಟ ಕಛೇರಿಗೆ ಜುಲೈ.31 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂಖ್ಯೆ : 9845164642/9060734627 ಸಂಪರ್ಕಿಸಬಹುದಾಗಿದೆ ಎಂದು ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇ-ಕೆವೈಸಿ ಮಾಡಿಸದಿದ್ದಲ್ಲಿ ಪಡಿತರ ರದ್ದು

**ಬಾಗಲಕೋಟೆ :** ಇ-ಕೆವೈಸಿ ಮಾಡಿಸದೇ ಇರುವ ಪಡಿತರ ಚೀಟಿಗಳು ಜುಲೈ ತಿಂಗಳಲ್ಲಿ ರದ್ದಾಗುವುದಿದ್ದು, ಬಾಗಲಕೋಟೆ ತಾಲೂಕಿನಲ್ಲಿ ಇ-ಕೆವೈಸಿ ಮಾಡಿಸದೇ ಇರುವ ಪಡಿತರ ಚೀಟಿದಾರರು ತಮ್ಮ ತಮ್ಮ ಗ್ರಾಮದ ಗ್ರಾಮ-ಒನ್ / ಕರ್ನಾಟಕ-ಒನ್ ಕೇಂದ್ರಗಳಲ್ಲಿ ಅಥವಾ ಸಂಬಂಧಿಸಿದ ನ್ಯಾಯಬೆಲೆ ಅಂಗಡಿಗಳಲ್ಲಿ ಹೋಗಿ ಇ-ಕೆವೈಸಿ ಮಾಡಿಸಿಕೊಳ್ಳತಕ್ಕದ್ದು, ಒಂದು ವೇಳೆ ಇ-ಕೆವೈಸಿ ಮಾಡಿಸದಿದ್ದಲ್ಲಿ ನಿಮ್ಮ ಪಡಿತರ ಚೀಟಿ ರದ್ದಾಗುವುದು ಎಂದು ಬಾಗಲಕೋಟೆ ತಹಶೀಲ್ದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಬಾಗಲಕೋಟೆ :** ತೋಟಗಾರಿಕೆ ಇಲಾಖೆಯಲ್ಲಿ 2025-26 ನೇ ಸಾಲಿಗೆ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ತಾಳೆಬೆಳೆ (ಓಒಇಔ-ಔಕ) ಯೋಜನೆಯಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ತಾಳೆ ಬೆಳೆ ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ ತಾಳೆ ಸಸಿಗಳಿಗೆ ಸಹಾಯಧನ ಹಾಗೂ 4 ವರ್ಷಗಳವರೆಗೆ ನಿರ್ವಹಣೆ ವೆಚ್ಚ, ಅಂತರ ಬೇಸಾಯ, ಡೀಸಲ್/ವಿದ್ಯುತ್/ಪೆಟ್ರೋಲ್ ಚಾಲಿತ ಪಂಪ್ ಸೆಟ್, ಕೊಳವೆ ಬಾವಿ, ತಾಳೆ ಬೆಳೆ ಬೇಸಾಯಕ್ಕೆ ಅವಶ್ಯಕವಿರುವ ಯಂತ್ರೋಪಕರಣ ಖರೀದಿಗೆ, ಎರೆಹುಳುಘಟಕ,ನೀರುಕೋಯ್ಲುಘಟಕ,ಎತ್ತರವಾದತಾಳೆಮರಗಳಿಂದ ತಾಳೆ ಹಣ್ಣುಗಳನ್ನು ಕಟಾವು ಮಾಡಲು ಪ್ರೋತ್ಸಾಹಧನ ಘಟಕಗಳಿಗೆ ಮಾರ್ಗಸೂಚಿಯನ್ವಯ ವೆಚ್ಚವನ್ನು ಪರಿಗಣಿಸಿ ನಿಯಮಾನುಸಾರ ಸಹಾಯಧನ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲೂಕಾಧಿಕಾರಿಗಳು ಹಾಗೂ ರೈತ ಸಂಪರ್ಕ ಕೇಂದ್ರ ಅಧಿಕಾರಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯಲು ತಿಳಿಸಿದೆ. ಆಸಕ್ತವುಳ್ಳ ರೈತರು ಸದರಿ ಯೋಜನೆಯ ಸದುಪಯೋಗ ಪಡೆಯಲು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಬಾಗಲಕೋಟೆ:** ಪ್ರಸಕ್ತ ಸಾಲಿನ ಆರ್ಥಿಕ ವರ್ಷದಲ್ಲಿ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

2023-24 ಮತ್ತು 2024-25 ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ನಲ್ಲಿ ಜುಲೈ 2 ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂಸಂ.080-22374848, 7899899039 ಸಂಪರ್ಕಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕ ಎಂ.ಜಿ.ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಲ್ಮೀಕಿ ಸಮುದಾಯ ಭವನಕ್ಕೆ 4.5 ಕೋಟಿ ಬಿಡುಗಡೆ ಮಾಡಲು ಮನವಿ



**ವಿಜಯಪುರ :** ವಿಜಯಪುರ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಮಾಡಲು ಅನುದಾನ ಬಿಡುಗಡೆ ಮಾಡಲು ಅಖಿಲ ಭಾರತೀಯ ವಾಲ್ಮೀಕಿ ಸಮಾಜ ಸೇವಾ ಸಂಘ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರು ಮನವಿಗೆ ತಕ್ಷಣ ಸ್ಪಂದಿಸಿ, ವಿಜಯಪುರ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಮಾಡಲು ಅನುದಾನ ಬಿಡುಗಡೆ ಮಾಡಲು ವಿನಂತಿಸಿ ಪರಿಶಿಷ್ಟ ವರ್ಗದ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಡಿ. ರಂದೀಪ ಅವರಿಗೆ ದೂರವಾಣಿ ಮೂಲಕ ಕೇಳಿಕೊಂಡಾಗ ಡಿ.ರಂದೀಪ ಅವರು ಸಕಾರಾತ್ಮಕವಾಗಿ ಸ್ಪಂದಿಸಿ ಹಣವನ್ನು ಬಿಡುಗಡೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಅಖಿಲ ಭಾರತೀಯ ವಾಲ್ಮೀಕಿ ಸಮಾಜ ಸೇವಾ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಟಗಿ ಹಾಗೂ ವಿವಿಧ ಸಂಘಟನೆ ಮುಖಂಡರುಗಳು ಉಪಸ್ಥಿತರಿದ್ದರು.

# ಸಂಗನಬಸವ ಅಂತಾರಾಷ್ಟ್ರೀಯ ವಸತಿ ಶಾಲೆಯಲ್ಲಿ ವಿಶ್ವ ನೇತ್ರದಾನ ದಿನಾಚರಣೆ




**ವಿಜಯಪುರ :** ಶ್ರೀ ಸಿದ್ಧೇಶ್ವರ ಸಂಸ್ಥೆಯ ಅಂಗವಾದ ಕವಲಗಿಯ ಸಂಗನಬಸವ ಅಂತಾರಾಷ್ಟ್ರೀಯ ವಸತಿಶಾಲೆಯಲ್ಲಿ ವಿಶ್ವ ನೇತ್ರದಾನ ದಿನವನ್ನು ಆಚ-ರಿಸಲಾಯಿತು.

ನೇತ್ರ ತಜ್ಞ ಡಾ. ಜಮೀರ ಗೋಲೇವಾಲೆ ಮುಖ್ಯ ಅತಿಥಿಗಳಾಗಿ ಮಾತನಾಡಿ, ನೇತ್ರದಾನ ಮಹಾದಾನ. ಹೀಗಾಗಿ ಮರಣದ ನಂತರ ನೇತ್ರದಾನ ಮಾಡುವ ಮುಖಾಂತರ ಅಂಧರ ಬಾಳಿಗೆ ಬೆಳಕಾಗಬೇಕೆಂದರು. ಇನ್ನೋರ್ವ ಮಕ್ಕಳ ತಜ್ಞ ಡಾ. ಬಸವಂತ್ರಾಯ ಮಸಳಿ ಮಾತನಾಡಿ, ಜನಸಾಮಾನ್ಯರಲ್ಲಿ ನೇತ್ರದಾನದ ಅವಶ್ಯಕತೆಕುರಿತುಜಾಗೃತಿಮೂಡಿಸಿಮನುಷ್ಯಜೀವನದ ಸಾರ್ಥಕತೆಯಅರಿವುಮೂಡಿಸಬೇಕೆಂದರು. ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯೆ ಶರ್ಮಿಳಾ ಹೇಮಂತ, ಕೇವಲ ಕಣ್ಣುಗಳಿದ್ದಾಗ ಮಾತ್ರ ನಾವು ಜಗತ್ತಿನ ಸೌಂದರ್ಯ, ಬಣ್ಣ, ಭಾವನೆಗಳು ಮತ್ತು ಪ್ರೀತಿಪಾತ್ರರನ್ನು ಕಾಣಲು ಸಾಧ್ಯ. ಆದ ಕಾರಣ ಕಣ್ಣಿನ ಬಗ್ಗೆ ಸೂಕ್ತ ಕಾಳಜಿ ವಹಿಸಬೇಕೇಂದರು.

ಕುಮಾರಿ ತನುಜಾ ಪಾಟೀಲ ಸ್ವಾಗತಿಸಿದರು. ಕುಮಾರಿ ಲಕ್ಷ್ಮಿ ನಿಂಬಾಳ ನಿರೂಪಿಸಿದರು. ಕುಮಾರಿ ವೈಷ್ಣವಿ ವಂದಿಸಿದರು.

# ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ಹಾಗೂ ಬಾಲ್ಯವಿವಾಹ ಪಿಡುಗು ನಿರ್ಮೂಲನೆಗೆ ಸಾರ್ವಜನಿಕರು ಕೈಜೋಡಿಸಿ: ಜಿಲ್ಲಾಧಿಕಾರಿ ಟಿ.ಭೂಬಾಲನ್



**ವಿಜಯಪುರ:**ಬಾಲಕಾರ್ಮಿಕಪದ್ಧತಿಹಾಗೂ ಬಾಲ್ಯ ವಿವಾಹದಂತಹ ಸಾಮಾಜಿಕ ಅನಿಷ್ಟ ಪಿಡುಗುಗಳ ಸಂಪೂರ್ಣ ನಿರ್ಮೂಲನೆಗೆ ಸಾರ್ವಜನಿಕರು, ಪೊ?ಷಕರು ಹಾಗೂ ಈ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಂಘ-ಸಂಸ್ಥೆಗಳು ಕೈಜೋಡಿಸಿ, ಈ ನಿಟ್ಟಿನಲ್ಲಿ ಎಲ್ಲರೂ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ ಸೂಕ್ತ ಜನಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘ ಇವರ ಸಂಂ-ಮುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವ ಬಾಲ ಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಉತ್ತಮ ಗುಣಮಟ್ಟದ ಆರೋಗ್ಯ, ಶಿಕ್ಷಣ ಮಕ್ಕಳ ಮೂಲಭೂತ ಹಕ್ಕಾಗಿದ್ದು, ಇದನ್ನು ಉತ್ತಮಪಡಿಸುವುದ-ರಿಂದ ಸುಭದ್ರ ಸಮಾಜದ ನಿರ್ಮಾಣಕ್ಕೆ ಅಡಿಪಾಯವಾಗುವುದು. ಬಾಲ ಕಾರ್ಮಿಕ ಹಾಗೂ ಬಾಲ್ಯ ವಿವಾಹ ಅನಿಷ್ಟ ಪದ್ಧತಿ ಮುಕ್ತ ಜಿಲ್ಲೆಯನ್ನಾಗಿಸಲು ಹಾಗೂ ಈ ಪಿಡಗುಗಳ ನಿರ್ಮೂಲನೆಗೊಳಿಸಲು ಕಟಿಬದ್ಧರಾಗಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಬಾಲ ಕಾರ್ಮಿಕ ಪದ್ದತಿಯ ನಿರ್ಮೂಲನೆಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳು ಶ್ರಮಿಸುತ್ತಿವೆ. ಈ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ. ಮಕ್ಕಳ ಸಹಾಯವಾಣಿ-1098 ಕರೆ ಮಾಡಿ ಮಾಹಿತಿ ನೀಡಿದಲ್ಲಿ ಮಕ್ಕಳ ರಕ್ಷಣೆಯ ಕಾರ್ಯ ಮಾಡಲಾಗುವುದೆಂದು ಅವರು ತಿಳಿಸಿದರು.

ಈ ದಿನ ದೇಶಾದ್ಯಂತ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನವನ್ನಾಗಿ ಆಚರಿಸಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣವೂ ಸೇರಿದಂತೆ ಮಕ್ಕಳ ರಕ್ಷಣೆಯ ಹಿತ ಕಾಯುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅನೇಕ ಯೋಜನೆಗಳನ್ನು ಜಾ-ರಿಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಯೋಜನೆಗಳ ಸದುಪಯೋಗ ಪಡೆದುಕೊಂಡು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವ ಮೂಲಕ ಅವರ ಜೀವನ ಹಾಗೂ ಭವಿಷ್ಯ ಸುಂದರಗೊಳಿಸುವ ಮಹತ್ತರ ಹೊಣೆ ಪಾಲಕರ ಮೇಲಿದೆ ಎಂದು ಹೇಳಿದರು.

ಐತಿಹಾಸಿಕ ಹಿನ್ನೆಲೆ ಇರುವ ನಮ್ಮ ಹೆಮ್ಮೆಯ ಜಿಲ್ಲೆಯಲ್ಲಿ ಸಂಪೂರ್ಣ ಬಾಲ ಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿಸುವ ನಿಟ್ಟಿನಲ್ಲಿ ನಮ್ಮೆಲ್ಲರ ಜವಾಬ್ದಾರಿ ಇನ್ನೂ ಹೆಚ್ಚಾಗಿದೆ. ಎಲ್ಲ ಮಕ್ಕಳನ್ನು ಶಾಲಾ ದಾಖಲಾತಿ ಮಾಡಿಸುವ ಮೂಲಕ ಶಾಲೆಯಿಂದ ಹೊರಗುಳಿಯುವ ಮಕ್ಕಳ ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಯಾವುದೇ ಮಗು ಶಾಲೆಯಿಂದ ಹೊರಗುಳಿಯದಂತೆ ಸಂಬಂಧಿಸಿದ ಇಲಾಖೆಗಳು ನಿಗಾವಹಿಸಬೇಕು. ಶಾಲೆಬಿಟ್ಟ ಮಕ್ಕಳ ಸಮಗ್ರ ಮಾಹಿತಿ ಕ್ರೋಢಿಕ-ರಿಸಬೇಕು. ಬಾಲ ಕಾರ್ಮಿಕರು ಕಂಡು ಬಂದಲ್ಲಿ ಸಂಬಂಧಿಸಿದ ಇಲಾಖೆಗಳಿಗೆ ಸಾರ್ವಜನಿಕರು ಮಾಹಿತಿ ನೀಡಬೇಕು. ಯಾವುದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ಶಿಕ್ಷಣವನ್ನು ಮೊಟಕುಗೊಳಿಸದೇ, ವಿದ್ಯಾಭ್ಯಾಸವನ್ನು ಮುಂದುವರೆಸುವ ಮೂಲಕ ಉನ್ನತ ಶಿಕ್ಷಣ ಪಡೆದುಕೊಂಡು ಬದುಕನ್ನು ಸುಂದರಗೊಳಿಸಿಕೊಂಡು, ಸಮಾಜಕ್ಕೆ ಹಾಗೂ ದೇಶಕ್ಕೆ ತಮ್ಮ ಕೊಡುಗೆ ನೀಡಬೇಕು. ಬಾಲ ಕಾರ್ಮಿಕ ಪದ್ಧತಿಯಿಂದ ಮಕ್ಕಳ ಭವಿಷ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕು-ರಿತು ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ತಮ್ಮ ನೆರೆಹೊರೆಯವರಿಗೂ ತಿಳುವಳಿಕೆ ನೀಡಬೇಕು. ಬಾಲ ಕಾರ್ಮಿಕ ಮಕ್ಕಳು ಕಂಡು ಬಂದಲ್ಲಿ ಮಾಹಿತಿ ನೀಡಿ, ಅವರ ರಕ್ಷಣೆ ಮಾಡಿ, ಅವರನ್ನು ಸಮಾಜದ ಮುಖ್ಯವಾಹಿನಿಗೆ ತಂದು ಅವರು ಶಿಕ್ಷಣ ಪಡೆದುಕೊಂಡು ಉತ್ತಮ ಜೀವನ ನಿರ್ವಹಿಸುವಂತಾಗಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಅವರು ಮಾತನಾಡಿ, 1986ರಲ್ಲಿ ಬಾಲ ಕಾರ್ಮಿಕ ನಿ??ಧ ಹಾಗೂ 2016ರಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ನಿ??ಧ ಕಾಯ್ದೆಯೂ ಜಾರಿಗೆ ಬಂದಿದೆ. ಬಾಲ ಕಾರ್ಮಿಕ ಪದ್ಧತಿ ಹೋಗಲಾಡಿಸಲು ಎಲ್ಲರ ಸಹಕಾರ ಅಗತ್ಯವಾಗಿದೆ. ಬಾಲ ಕಾರ್ಮಿಕರು ಕಂಡು ಬಂದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕಾಗಲಿ, ಸಂಬಂಧಿಸಿದ ಇಲಾಖೆಗಳಿಗೆ ಸಾರ್ವಜನಿಕರು ಮಾಹಿತಿ ನೀಡಬೇಕು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊ?ಲಿಸ್ ವ-ರಿ?ಾ?ಠಧಿಕಾರಿ ಶಂಕರ ಮಾರಿಹಾಳ ಅವರು ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಪ್ರತಿಯೊಬ್ಬರಿಗೂ ಶಿಕ್ಷಣ ಅವಶ್ಯಕವಾಗಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು. ಯಾವುದೇ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳುವ ಬಹು ದೊಡ್ಡ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಉಮಾಶ್ರೀ ಎಸ್.ಕೋಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ಮನಸ್ಸು ಬಹಳ ಸೂಕ್ಷ್ಮವಾದದ್ದು, ಅವರ ಬಾಲ್ಯವನ್ನು ಉತ್ತಮವಾಗಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಬಾಲಕಾರ್ಮಿಕ ಮಕ್ಕಳನ್ನು ತೊಡಗಿಸಿಕೊಂಡಿರುವ ಮಾಲೀಕರ ವಿರುದ್ಧ ಈಗಾಗಲೇ ಬಹಳಷ್ಟು ಕ್ರಮಗಳನ್ನು ತೆಗೆದುಕೊಳ್ಳಲಾಗತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರ 11 ಇಲಾಖೆಗಳ ಅಧಿಕಾರಿಗಳನ್ನು ನಿರೀಕ್ಷಕರನ್ನಾಗಿ ನೇಮಕ ಮಾಡಿದ್ದು, ಈ ಅಧಿಕಾರಿಗಳ ತಂಡ ಯೋಜಿತವಾಗಿ ಹಾಗೂ ಅನಿರೀಕ್ಷಿತವಾಗಿ ದಾಳಿ ಮಾಡುವ ಮೂಲಕ ಮಕ್ಕಳನ್ನು ರಕ್ಷಣೆ ಮಾಡಿ, ಮಕ್ಕಳ ಕಲ್ಯಾಣ ಸಮಿತಿಗೆ ಒಪ್ಪಿಸುತ್ತದೆ. ಜಿಲ್ಲಾಧಿಕಾ-ರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸಾಯಿಟಿ ವತಿಯಿಂದ ಸಾಕಷ್ಟು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಜಿಲ್ಲಾಧಿಕಾರಿಗಳ ಮಾರ್ಗದರ್ಶನದ ಮೇರೆಗೆ, ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 26 ಪ್ರಕರಣಗಳನ್ನು ದಾಖಲಿಸಲಾಗಿದೆ. ಮಾಲೀಕರಿಗೆ ಜಾಗೃತಿ ಸಹ ಮೂಡಿಸಲಾಗುತ್ತಿದೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಾರ್ವಜನಿಕರ ಹಾಗೂ ಎಲ್ಲ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಅನೌಪಚಾರಿಕ ಶಿಕ್ಷಣ ಸಂಸ್ಥೆಯ ಫಾದರ್ ಕೆವಿನ್ ಸೆಕ್ವೆರಾ ಅವರು, ಸಮಗ್ರ ಮಕ್ಕಳ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ ಹಾಗೂ ಕರ್ತವ್ಯವೂ ಆಗಿದೆ. ಬಾಲ ಕಾರ್ಮಿಕ ಪದ್ದತಿಯ ಪಿಡುಗು ಮಕ್ಕಳ ತಮ್ಮ ಸಾಮಾಜಿಕ ಆರ್ಥಿಕ ಸ್ಥಿತಿಯನ್ನು ಕಸಿದುಕೊಳ್ಳುತ್ತಿದ್ದು, ಬಾಲ ಕಾರ್ಮಿಕ ಪದ್ದತಿಯ ನಿರ್ಮೂಲನೆಗೆ ಈ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಂಘ-ಸಂಸ್ಥೆಗಳು, ಸಾರ್ವಜನಿಕರ ಸಹಕಾರದ ಅಗತ್ಯತೆಯ ಕುರಿತು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಕೆ. ಕೆ ಚವ್ಹಾಣ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಟಿ.ಎಸ್.ಕೋಲಾರ, ಜಿಲ್ಲಾ ಶಸ್ತ್ರ ಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ದೀಪಾಕ್ಷಿ ಜಾನಕಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಬಸಮ್ಮ ಹತ್ತರಕಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಪ್ರಮಾಣ ವಚನ ಬೋಧಿಸಿದರು.

**ಜಾಗೃತಿ ಜಾಥಾಗೆ ಚಾಲನೆ :**

ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಾಥಾಕ್ಕೆ ಹಸಿರು ನಿಶಾನೆ ತೋರುವಮೂಲಕಪ್ರಧಾನಜಿಲ್ಲಾಮತ್ತುಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಗೌರವಾನ್ವಿತ ಹರೀಶ ಎ. ಅವರು ಚಾಲನೆ ನೀಡಿದರು. ಜಾಥಾವು ಗಾಂಧಿ ಚೌಕ್‌ದಿಂದ ವಿವಿಧ ಮಾರ್ಗಗಳಲ್ಲಿ ಸಂಚರಿಸಿ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಮಾವೇಶಗೊಂಡಿತು. ವಿವಿಧ ಘೋಷ ವಾಕ್ಯ ಹೇಳಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳಪ್ರಾಧಿಕಾರದಸದಸ್ಯಕಾರ್ಯದರ್ಶಿ ಅರವಿಂದ ಹಾಗರಗಿ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ.ಕೆ ಹೊಸಮನಿ, ಶಾಲೆಯ ಪ್ರಾಂಶುಪಾಲರು, ವಿವಿಧ ಶಾಲೆಗಳ ವಿದ್ಯಾರ್ಥಿಗಳು ಉಪಸ್ಥಿತ-ರಿದ್ದರು.

# ಹಿರಿಯ ನಾಗರಿಕರ ಧರಣಿ ಸತ್ಯಾಗ್ರಹ

**ಬಾಗಲಕೋಟೆ :** ಅಂತರಾಷ್ಟ್ರೀಯ ಹಿರಿಯ ನಾಗರಿಕರ ದೌರ್ಜನ್ಯ ತಡೆ ದಿನಾಚರಣೆ ನಿಮಿತ್ಯ ಹಿರಿಯ ನಾಗರಿಕರ ಜೀವನ ಗೌರವ ಅಭಿಯಾನ ಜಿಲ್ಲಾ ಘಟಕದಿಂದ ಹಿರಿಯ ನಾಗರಿಕರ ಧರಣಿ ಸತ್ಯಾಗ್ರಹವನ್ನು ಜೂನ್ 16 ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧ್ಯಕ್ಷರಾದ ವ್ಹಿ. ಜಿ. ಮಠಪತಿ ಪತ್ರಿಕಾಪ್ರಕಟಣೆಯಲ್ಲಿತಿಳಿಸಿದ್ದಾರೆ. ಅಂದು ಬೆಳಿಗ್ಗೆ 10-30 ರಿಂದ 2-30 ರ ವರೆಗೆ ಸತ್ಯಾಗ್ರಹವು ನಡೆಯಲಿದ್ದು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಮುಖ್ಯ ಮಂತ್ರಿ ಸಿದ್ದರಾಮಯ್ಯನವರಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಲಾಗುವುದು.

ರಾಷ್ಟ್ರದ ಎಲ್ಲ ಹಿರಿಯ ನಾಗ-ರಿಕರನ್ನು ರಾಷ್ಟ್ರದ ಸಂಪತ್ತು ಎಂದು ಘೋಷಣೆ ಮಾಡಬೇಕು. ಆರ್ಥಿಕವಾಗಿ ದುರ್ಬಲವಿದ್ದವ-ರಿಗೆ ಹತ್ತು ಸಾವಿರ ರೂ. ಮಾಸಿಕ ವೃದ್ಯಾಪ್ಯ ವೇತನ ನೀಡಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಿರಿಯ ನಾಗರಿಕರಿಗಾಗಿ ಪ್ರತ್ಯೇಕ ಸಚಿವರನ್ನು ನೇಮಿಸಬೇಕು. ರೈಲ್ವೆ ಪ್ರಯಾಣ ದರದಲ್ಲಿ ರಿಯಾಯಿತಿಯನ್ನು ಪುನಃ ಪ್ರಾರಂಭಿಸಬೇಕು. ಆರೋಗ್ಯವಿಮೆ ಕಾರ್ಡು ತಕ್ಷಣ ಸರಿಪಡಿಸಬೇಕು ಸೇರಿದಂತೆಇನ್ನಿತರಬೇಡಿಕೆಗಳನ್ನು ಈಡೇರಿಸಬೇಕೆಂದು ಜಿಲ್ಲಾ ಘಟಕವು ಆಗ್ರಹಿಸಿದೆ.

# ಮಾರುತೆಪ್ಪ ಕಿರ್ಲೋಸ್ಕರ (ಗೌಳಿ) ನಿಧನ



**ಬಾಗಲಕೋಟ :** ನಗರದ ಗೌಳಿ ಸಮಾಜದ ಹಿರಿಯರಾದ ಮಾರುತಪ್ಪ ಅಂಬಾಜಿ ಕಿರ್ಲೋಸ್ಕರ (ಗೌಳಿ) ಇವರು ಜೂನ್ 11 ರಂದು ತಮ್ಮ 96 ನೆಯ ವಯಸ್ಸಿನಲ್ಲಿ ನಿಧನರಾದರು. ಮೃತರು ತಮ್ಮ ಹಿಂದೆ ಓರ್ವ ಪುತ್ರ ಹಾಗೂ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ.

# ಎಲ್ಲ ಇಲಾಖೆಗಳು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಿ: ರಮೇಶ ಜಮಖಂಡಿ



**ಕಮತಗಿ :** ಮುಂಗಾರು ಮಳೆಯ ಆರಂಭದ ಹಿನ್ನೆಲೆಯಲ್ಲಿ ಪ್ರವಾಹದ ಸಾಧ್ಯತೆ ಇರುವುದ-ರಿಂದ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲಾ ಇಲಾಖೆಗಳು ಒಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಪಟ್ಟಣ ಪಂಚಾಯತ್ ಅಧ್ಯಕ್ಷ ರಮೇಶ ಜಮಖಂಡಿ ಕರೆ ನೀಡಿದ್ದಾರೆ.

ಬುಧವಾರ ಪಟ್ಟಣ ಪಂಚಾಯತ್ ಕಚೇರಿಯ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚ-ರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲಾ ಇಲಾಖೆ ಅಧಿಕಾರಿಗಳು ಪರಸ್ಪರ ಸಹಕಾರದೊಂದಿಗೆ ಕಾರ್ಯನಿರ್ವಹಿಸಬೇಕು.

ಪಟ್ಟಣ ಪಂಚಾಯಿತಿ ವತಿಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ, ಎಂದು ಅವರು ಹೇಳಿದರು.

ಪ್ರವಾಹದ ಸಾಧ್ಯತೆ ಇರುವ ಪ್ರದೇಶಗಳಲ್ಲಿ ಜನರಿಗೆ ಮುನ್ನೆಚ್ಚ-ರಿಕೆ ನೀಡುವುದು,

ಅಗತ್ಯ ಸಾಧನಗಳು ಮತ್ತು ಸಿಬ್ಬಂದಿ ಸಿದ್ಧತೆ, ತುರ್ತು ಸಂಪರ್ಕ ವ್ಯವಸ್ಥೆ, ಮತ್ತು ಸಾರ್ವಜನಿಕ-ರಿಗೆ ಸಲಹೆ ನೀಡುವಂತಹ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು. ಎಲ್ಲಾ ಇಲಾಖೆಗಳು ಪರಸ್ಪರ ಸಹಕಾರದೊಂದಿಗೆ ಕಾರ್ಯ ನಿರ್ವಹಿಸುವುದರ ಮಹತ್ವವನ್ನು ಅಧ್ಯಕ್ಷರು ಒತ್ತಿ ಹೇಳಿದರು.

ಸಭೆಯಲ್ಲಿ ಪ.ಪಂ.ಮುಖ್ಯಾಧಿಕಾರಿ ಎಫ್. ಎನ್. ಹುಲ್ಲಿಕೇರಿ, ಅರಣ್ಯ ಇಲಾಖೆ, ಪೊಲೀಸ್ ಇಲಾಖೆ, ಕಂದಾಯ, ಕೆಇಬಿ, ಆರೋಗ್ಯ, ಪಶು ಸಂಗೋಪನಾ, ಶಿಕ್ಷಣ ಇಲಾಖೆಗಳ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಸಿಬ್ಬಂದಿಗಳು, ಪ.ಪಂ. ಸದಸ್ಯರು, ನಾಮನಿರ್ದೇಶಿತ ಸದಸ್ಯರು, ಸಿಬ್ಬಂದಿ ವರ್ಗ ಭಾಗವಹಿಸಿದ್ದರು.

# ಪ್ಲಾಸ್ಟಿಕ್ ಮುಕ್ತ ಲಿಂಗಸುಗೂರು ಅಭಿಯಾನಕ್ಕೆ ಚಾಲನೆ: ಉಂಡಿ ಮಂಜುಳಾ ಶಿವಪ್ಪ.ನ್ಯಾಯಧೀಶರು



**ಲಿಂಗಸುಗೂರು :** ಉತ್ತಮ ಜೀವನಕ್ಕಾಗಿ ಪರಿಸರ ಉಳಿಸಿ ಬೆಳಿಸಬೇಕಾಗಿದೆ ಎಂದು ನ್ಯಾಯಧೀಶರಾದ. ಉಂಡಿ ಮಂಜುಳ ಶಿವಪ್ಪ ವಿಶ್ವ ಪರಿಸರ ದಿನಾಚರಣೆ ದಿನದಂದು ಪ್ಲಾಸ್ಟಿಕ್ ಮುಕ್ತ ಪರಿಸರ ಕಾಪಾಡಿಕೊಂಡು ಸ್ವಚ್ಚ ಪರಿಸರ ಕಾಪಾಡ ಬೇಕೆಂದು ಹೇಳಿದರು..ಅವರು ಪಟ್ಟಣದ ಹೊಸ ನ್ಯಾಯಾಲಯದ ಆವರಣದಲ್ಲಿ ಹಾಗೂ ಆದರ್ಶ ಮಹಾವಿದ್ಯಾಲಯದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ತಾಲ್ಲೂಕು ನ್ಯಾಯವಾದಿ ಗಳ ಸಂಘ ತಾಲೂಕು ಆಡಳಿತ ಅರಣ್ಯ ಇಲಾಖೆ ತೋಟಗಾರಿಕೆ ಶಿಕ್ಷಣ ಪೋಲಿಸ್ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ಲಾಸ್ಟಿಕ್ ಮುಕ್ತ ಲಿಂಗಸುಗೂರು ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತ ಪರಿಸರವನ್ನು ಉಳಿಸಿ ಉತ್ತಮ ಜೀವನಕ್ಕೆ ದಾರಿಯಾಗುತ್ತದೆ ಎಂದರು

ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶ-ಅಂಬಣ್ಣ.ಕೆ ಸಹಾಯಕ ಸರ್ಕಾರಿ ಅಭಿಯೋಜಕ ವಿರುಪಣ್ಣ ಧುಮುತಿ.ತಾಲೂಕು ವಕೀಲರ ಸಂಘದ ತಾಲೂಕು ಅಧ್ಯಕ್ಷ ಭೂಪನಗೌಡ ಪಾಟೀಲ್ ಅರಣ್ಯಾಧಿಕಾರಿ ವಿದ್ಯಾಶ್ರೀ ಶೈಲ ವಾಗ್ಮೋರೆ ಭೀಮಣ್ಣ ರತ್ನಮ್ಮ ಬಸವರಾಜ್ ಗುಡಿಹಾಳ ನ್ಯಾಯಾಲಯದ ಸಿಬ್ಬಂಧಿಗಳು ವಕೀಲರು ವಿಧ್ಯಾರ್ಥಿ ಗಳು ಸೇರಿದಂತೆ ಇದ್ದರು.

**ವರದಿ ಚಂದ್ರೇಗೌಡ ಹೊನ್ನಳ್ಳಿ.**

# ಸದಾಶಿವ ರಾವಪ್ಪ ಘಂಟಿ ನಿಧನ



**ಮಹಾಲಿಂಗಪುರ :** ಸಮೀಪದ ಬಿಸನಾಳ ಗ್ರಾಮದ ನಿವಾಸಿ, ಸಮೀರವಾಡಿಯ ಗೋದಾವರಿ ಕಾರ್ಖಾನೆಯ ಕಾರ್ಮಿಕರ ಸಹಾಯಕ ಅಧಿಕಾರಿ ಸದಾಶಿವ ರಾವಪ್ಪ ಘಂಟಿ ತಮ್ಮ 30 ನೆಯ ವಯಸ್ಸಿನಲ್ಲಿ ಜೂನ್ 12 ರಂದು ಹೃದಯಾಘಾತದಿಂದ ನಿಧನರಾದರು. ಮೃತರು ತಮ್ಮ ಹಿಂದೆ ಪತ್ನಿ, ಪುತ್ರಿ, ವೃದ್ಧ ತಂದೆ-ತಾಯಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ನಿಧನಕ್ಕೆ ಜಿಬಿಎಲ್ ಕಾರ್ಖಾನೆಯ ಅಧಿಕಾರಿಗಳು, ಕಾರ್ಮಿಕರು ಸಂತಾಪ ಸೂಚಿಸಿದ್ದಾರೆ.

# ಕೂಡ್ಲಿಗಿ ಪಟ್ಟಣದಲ್ಲಿ ನಮ್ಮ ಕ್ಲಿನಿಕ್ ಉದ್ಘಾಟಿಸಿದ ಶಾಸಕ ಎನ್.ಟಿ. ಶ್ರೀನಿವಾಸ್



**ಕೂಡ್ಲಿಗಿ :** ಇರುವ ಸಮಯದಲ್ಲಿಯೇ ಉತ್ತಮ ಸೇವೆ ನೀಡಿ, ಜನರ ಆರೋಗ್ಯ ಸುಧಾರಿಸಿ ಎಂದು ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಹೇಳಿದರು. ಪಟ್ಟಣದ ಕೊತ್ತಲಾಂಜನೇಯ ಸ್ವಾಮಿ ದೇವಸ್ಥಾನದ ಬಳಿ ಶುಕ್ರವಾರ ರಾತ್ರಿ ನಮ್ಮ ಕ್ಲಿನಿಕ್ ಉದ್ಘಾಟಿಸಿ ಅವರು ಮಾತನಾಡಿದರು.

ನಿಮ್ಮಲ್ಲಿ ಬರುವ ರೋಗಿಗಳು ನಿಮ್ಮಷ್ಟು ವಿದ್ಯಾವಂತರಾಗಿರುವುದಿಲ್ಲ. ಆದರೆ ಅವರು ಕೆಲವೇ ನಿಮಿಷಗಳಲ್ಲಿನಿಮ್ಮಸ್ವಾಭಾವವನ್ನುಅಂದಾಜಿಸುತ್ತಾರೆ. ಇದು ಅನೇಕ ಸಲ ಸರಿಯೂ ಇರುತ್ತದೆ. ಅದ್ದರಿಂದ ರೋಗಿಗಳನ್ನು ಶಾಂತತೆಯಿಂದ ನೋಡಿಕೊಳ್ಳಬೇಕು. ಅಸ್ಪತ್ರೆಗಳಲ್ಲಿನ ಸಮಸ್ಯೆ ಹೇಳಿಕೊಂಡು ನಿತ್ಯವೂ ನಮಗೆ ದೂರು ಬರುತ್ತವೆ. ನೀವು ಸರಿಯಾಗಿ ತಿಳಿ ಹೇಳಿದರೆ ಸಮಸ್ಯೆಗಳನ್ನು ಸರಿಪಡಿಸಿಕೊಳ್ಳಬಹುದು. ದೂರುಗಳುಕಡಿಮೆಯಾದಷ್ಟುನಾವುಜನರಆರೋಗ್ಯ ಕಾಪಾಡುತ್ತೇವೆ ಎಂದು ಅರ್ಥ. ನಮ್ಮ ಸಮಸ್ಯೆಯನ್ನು ಜನರು ಕೇಳುವುದಿಲ್ಲ. ಆದರೆ ನಮ್ಮಿಂದ ಅವರು ಹೆಚ್ಚಿನ ಸೇವೆ ನಿರೀಕ್ಷೆ ಮಾಡುತ್ತಾರೆ. ಅದರಿಂದ ಎಲ್ಲವನ್ನು ತೂಗಿಸಿಕೊಂಡು ಹೋಗಬೇಕು ಎಂದು ಸಲಹೆ ನೀಡಿದ ಅವರು, ಕೂಡ್ಲಿಗಿ ಹಾಗೂ ಉಜ್ಜನಿ ಭಾಗದ ಆರೋಗ್ಯ ಸಿಬ್ಬಂದಿಗೆ ಈ ತಿಂಗಳಲ್ಲಿಯೇ ಸನ್ಮಾನ ಏರ್ಪಡಿಸಲಾಗುವುದು ಎಂದರು.

ಪಟ್ಟಣ ಪಂಚಾಯ್ತಿ ಅಧ್ಯಕ್ಷ ಕವಲ್ಲಿ ಶಿವಪ್ಪ ನಾಯಕ ಮಾತನಾಡಿ, ನಿಮ್ಮಲ್ಲಿರುವ ಸೇವೆಗಳನ್ನು ಜನರಿಗೆ ನೀಡಿ, ನೀವು ಇದು ಇಲ್ಲ ಅದು ಇಲ್ಲ ಎಂದರೆ ಜನರು ನಿಮ್ಮಲ್ಲಿಗೆ ಬರುವುದಿಲ್ಲ. ಇದರ ಬಗ್ಗೆ ಹೆಚ್ಚಿನ ನಿಗ ವಹಿಸಿ ಎಂದರು. ಜಿಲ್ಲಾ ಆರೋಗ್ಯಧಿಕಾರಿ ಡಾ. ಎಲ್. ಶಂಕರ್ ನಾಯ್ಕ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರ್ ಸಿ ಎಚ್ ಅಧಿಕಾರಿ ಡಾ. ಜಂಬಯ್ಯ, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಎಸ್.ಪಿ. ಪ್ರದೀಪ್, ಕಿರಿಯ ಆರೋಗ್ಯ ನಿರೀಕ್ಷಕಿಯರಾದ ಪಿ.ಬಿ. ಗಿರಿಜಾ, ಭವ್ಯ, ಸುನಿತಾ, ನಮ್ಮ ಕ್ಲಿನಿಕ್ ವೈದ್ಯ ಡಾ. ಮಮತ, ಪಟ್ಟಣ ಪಂಚಾಯ್ತಿ ಸದಸ್ಯರಾದ ಡಾಣಿ ಚೌಡಮ್ಮ, ಬಸು ನಾಯ್ಕ್, ಸಚಿನ್ ಕುಮಾರ್, ಶಿರಿಬಿ ಮಂಜುನಾಥ ಹಾಗೂ ಅರೋಗ್ಯ ಇಲಾಖೆಯ ಸಿಬ್ಬಂದಿ ಪಾಲ್ಗೊಂಡಿದ್ದರು.

# ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ



**ಅಥಣಿ :** ಸನ್ 2024-25 ಸಾಲಿನಲ್ಲಿ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 90ಕ್ಕಿಂತ ಅಧಿಕ ಅಂಕಗಳನ್ನು ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 85 ಕ್ಕಿಂತ ಅಧಿಕ ಅಂಕಗಳನ್ನು ಪಡೆದ ಆದಿ ಬಣಜಿಗ ಸಮಾಜದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿವರ್ಷದಂತೆ ಈ ಬಾರಿಯೂ ಅಥಣಿ ಆದಿ ಬಣಜಿಗ ಯುವ ವೇದಿಕೆ ವತಿಯಿಂದ ರವಿವಾರ ದಿ. 22 ರಂದು ಮುಂಜಾನೆ 10 ಗಂಟೆಗೆ ಶಿವಣಗಿ ಸಾಂಸ್ಕೃತಿಕ ಭವನದಲ್ಲಿ ರಾಜ್ಯಮಟ್ಟದ 8ನೇ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಉತ್ತಮ ದರ್ಜೆಯಲ್ಲಿ ಪಾಸಾಗಿರುವ ಪ್ರತಿಭಾನ್ವಿತ ವಿದ್ಯಾರ್ಥಿ, ವಿದ್ಯಾರ್ಥಿನಿಯರು ತಮ್ಮ ಅಂಕಪಟ್ಟಿ, ಒಂದು ಭಾವಚಿತ್ರವನ್ನು ಮಂಗಳವಾರ ದಿ. 16/06/2025 ರೊಳಗಾಗಿ ವಾಟ್ಸಾಪ್ ನಂ : 9945552428, 9945847373, 9686504033 ಗೆ ಕಳುಹಿಸಬೇಕು ಎಂದು ಆದಿ ಬಣಜಿಗ ಯುವ ವೇದಿಕೆಯ ಅಧ್ಯಕ್ಷ ರಾಜು ಆಲಬಾಳ ಪ್ರಕಟಣೆಗೆ ತಿಳಿಸಿದ್ದಾರೆ.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

Designed by MKG-9535762618